ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೧೦

**ಪಟ್ಟಿ – ೦೩**

# ಕರ್ನಾಟಕ ವಿಧಾನ ಪರಿಷತ್ತು

ನೂರ ಇಪ್ಪತ್ತೊಂಬತ್ತನೇ ಅಧಿವೇಶನ

**ಬುಧವಾರ, ದಿನಾಂಕ : ೧ನೇ ಜುಲೈ, ೨೦೧೫**

---

## ಸಮೂಹ – III

೧. ಅರಣ್ಯ ಸಚಿವರು

೨. ಕಂದಾಯ ಸಚಿವರು

೩. ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು

೪. ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು

೫. ಸಣ್ಣ ನೀರಾವರಿ ಸಚಿವರು

೬. ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು

೭. ಕಾರ್ಮಿಕ ರಾಜ್ಯ ಸಚಿವರು

---

## ಸಂಧ್ಯಾ-ಸುರಕ್ಷಾ ಹಾಗೂ ಇನ್ನಿತರ ಯೋಜನೆಗಳು

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೧ (೩೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯಲ್ಲಿ ಸಂಧ್ಯಾ ಸುರಕ್ಷಾ, ವಿಧವಾ ವೇತನ, ವೃದ್ಧಾಪ್ಯ ವೇತನ, ಅಂಗವಿಕಲ ವೇತನ ಮತ್ತು ಮನಸ್ವಿನಿ ಯೋಜನೆಗಳ ಜಾರಿಯಲ್ಲಿ ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಯೋಜನೆಗಳಡಿಯಲ್ಲಿ ಅರ್ಜಿ ಸಲ್ಲಿಸಲು ಇರುವ ಮಾನದಂಡಗಳೇನು ;

(ಇ) ಯೋಜನೆವಾರು ಫಲಾನುಭವಿಗಳಿಗೆ ಎಷ್ಟು ಮೊತ್ತ ನೀಡಲಾಗುತ್ತದೆ ; (ಯೋಜನೆವಾರು ವಿವರ ನೀಡುವುದು)

(ಈ) ಪ್ರಸ್ತುತ ಈ ಯೋಜನೆಗಳಿಗಾಗಿ ಸಲ್ಲಿಸಿರುವ ಅರ್ಜಿಗಳೆಷ್ಟು; ಎಷ್ಟು ಫಲಾನುಭವಿಗಳಿಗೆ ಮಂಜೂರು ಮಾಡಲಾಗಿದೆ ? (ಯೋಜನೆವಾರು ಪ್ರತ್ಯೇಕ ವಿವರ ನೀಡುವುದು)

## ಮಹಿಳಾ ಉದ್ಯೋಗಿಗಳ ಬಗ್ಗೆ

**ಶ್ರೀಮತಿ ಮೋಟಮ್ಮ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೧೨ (೩೯೩) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಿದ್ಧ ಉಡುಪು (ಗಾರ್ಮೆಂಟ್ಸ್) ತಯಾರಿಕೆಯ ಕಾರ್ಖಾನೆಗಳು ಎಷ್ಟಿವೆ ; (ಹೆಸರು, ವಿಳಾಸಗಳೊಡನೆ ಜಿಲ್ಲಾವಾರು ವಿವರ ಒದಗಿಸುವುದು)



(ಆ) ಈ ಗಾರ್ಮೆಂಟ್ಸ್‌ಗಳಲ್ಲಿ ದುಡಿಯುತ್ತಿರುವ ಉದ್ಯೋಗಿಗಳೆಷ್ಟು ; (ಪುರುಷ/ಮಹಿಳೆಯರ ಸಂಖ್ಯೆಗಳನ್ನು ಜಿಲ್ಲಾವಾರು ನೀಡುವುದು)

(ಇ) ಈ ಗಾರ್ಮೆಂಟ್ಸ್‌ಗಳಲ್ಲಿ ದುಡಿಯುತ್ತಿರುವ ಮಹಿಳೆಯರ ಪೈಕಿ ಶೇಕಡ ೫೦ ಅನಿಮಿಯಾದಿಂದ ನರಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಈ ಮಹಿಳಾ ಉದ್ಯೋಗಿಗಳ ಆರೋಗ್ಯ, ಕಲ್ಯಾಣ, ರಕ್ಷಣೆ ವಿಷಯಗಳ ಕಾರ್ಮಿಕ ಕಾಯಿದೆಗಳನ್ನು ರಾಜ್ಯದಲ್ಲಿನ ಬಹುತೇಕ ಗಾರ್ಮೆಂಟ್ಸ್ ಮಾಲೀಕರು ಪಾಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರದ ಕ್ರಮಗಳೇನು ; ಅಲ್ಲದೆ ನಿಯಮಗಳ ರೀತ್ಯಾ ವೇತನವನ್ನು ಪಾವತಿಸದಿರುವ ಬಗ್ಗೆ ಕೈಗೊಳ್ಳಲಿರುವ ಕ್ರಮಗಳೇನು ?

## ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಗೆ ಸ್ವಾಧೀನ ಪಡಿಸಲಿಚ್ಛಿಸಿರುವ ಭೂಮಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೩ (೪೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಗೋಸ್ಕರ ಸ್ವಾಧೀನಪಡಿಸಲಿಚ್ಛಿಸಿರುವ ಅರಣ್ಯ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ; ಕಂದಾಯ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ; ಖಾಸಗಿ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಯಲ್ಲಿ ಭೂ ಸ್ವಾಧೀನ ಪ್ರಕ್ರಿಯೆಯು ಪ್ರಾರಂಭಿಸಲಾದ ಒಟ್ಟು ಭೂಮಿಯ ವಿಸ್ತೀರ್ಣವೆಷ್ಟು ; ಪ್ರಕ್ರಿಯೆಯು ಯಾವ ಹಂತದಲ್ಲಿದೆ ; (ತಾಲ್ಲೂಕುವಾರು ವಿವರ ನೀಡುವುದು)

(ಇ) ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಯಲ್ಲಿ ಅನುಮತಿ ಪಡೆದ ಅರಣ್ಯ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ; ಅನುಮತಿ ಪಡೆದ ಕಂದಾಯ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ; ಅನುಮತಿ ಪಡೆದ ಖಾಸಗಿ (ಪಟ್ಟ) ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಉಡುಪಿ ಜಿಲ್ಲೆಯಲ್ಲಿ ಕಳೆದ ೩ ವರ್ಷಗಳಲ್ಲಿ ದಾಖಲಾದ ಕಂದಾಯ ಮೇಲ್ಮನವಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೪ (೪೦) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ದಾಖಲಾದ ಕಂದಾಯ ಮೇಲ್ಮನವಿ ಪ್ರಕರಣಗಳ ಸಂಖ್ಯೆ ಎಷ್ಟು ; ಇತ್ಯರ್ಥಗೊಂಡ ಮೇಲ್ಮನವಿಗಳ ಸಂಖ್ಯೆ ಎಷ್ಟು ; ಇತ್ಯರ್ಥಗೊಳ್ಳಲು ಬಾಕಿ ಇರುವ ಮೇಲ್ಮನವಿಗಳ ಸಂಖ್ಯೆ ಎಷ್ಟು ; (ವರ್ಷವಾರು, ತಾಲ್ಲೂಕುವಾರು ವಿವರ ನೀಡುವುದು)



(ಆ) ಈ ಕಂದಾಯ ಮೇಲ್ಮನವಿ ಎನ್ನುವುದು ಭ್ರಷ್ಟ ಅಧಿಕಾರಿಗಳು ಮುಗ್ಧ ರೈತರ ಮೇಲೆ ಮಾಡುವ ದೌರ್ಜನ್ಯದ ಪ್ರತಿರೂಪ ಎನ್ನುವುದನ್ನು ಸರ್ಕಾರ ಗಮನಿಸಿದೆಯೇ ; ಇಲ್ಲವಾದಲ್ಲಿ ಭ್ರಷ್ಟಾಚಾರಕ್ಕಾಗಿ ದುರುದ್ದೇಶ ಪೂರಿತವಾಗಿ ತಪ್ಪು ಮಾಡಿದ ಅಧಿಕಾರಿಗಳ ಮೇಲೆ ಶಿಕ್ಷೆ ನೀಡದೆ ಇರಲು ಕಾರಣಗಳೇನು ?

## ಎತ್ತಿನ ಹೊಳೆ ಕುಡಿಯುವ ನೀರು ಯೋಜನೆಗೆ ಅರಣ್ಯ ಇಲಾಖೆಯಿಂದ ಅನುಮತಿ ಪಡೆದ ಅರಣ್ಯ ಭೂಮಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೫ (೪೩) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಯಲ್ಲಿ ಅರಣ್ಯ ಇಲಾಖೆಯಿಂದ ಅನುಮತಿ ಪಡೆದು ಸ್ವಾಧೀನ ಪಡಿಸಿಕೊಳ್ಳಲು ಇಚ್ಚಿಸಿರುವ ಅರಣ್ಯ ಭೂಮಿಯ ಒಟ್ಟು ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಆ) ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಯಲ್ಲಿ ಅನುಮತಿ ಪಡೆದ ಅರಣ್ಯ ಭೂಮಿಯು ಒಟ್ಟು ವಿಸ್ತೀರ್ಣವೆಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಗೆ ಅನುಮತಿ ಪಡೆದ ಅರಣ್ಯ ಭೂಮಿಯಲ್ಲಿ ತೆರವುಗೊಳಿಸಲಾದ ಮರ ಮತ್ತು ಕಟ್ಟಿಗೆಗಳ ಪ್ರಮಾಣವೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ವರಾಹಿ ನೀರಾವರಿ ಯೋಜನೆಯ ಕಾಲುವೆಗಳ ಮೂಲಕ ರೈತರ ಹೊಲಗಳಿಗೆ ನೀರು ಹಾಯಿಸಿರುವ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೬ (೪೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೊರಿಯಬ್ಬೆಯಲ್ಲಿರುವ ಡೈವರ್ಶನ್ ವಿಯರ್ ಮುಖಾಂತರ ವರಾಹಿ ನೀರಾವರಿ ಯೋಜನೆಯ ಕಾಲುವೆಗಳ ಮೂಲಕ ಮೊದಲನೇ ಹಂತವಾಗಿ ರೈತರ ಹೊಲಗಳಿಗೆ ಯಾವಾಗ ನೀರನ್ನು ಹರಿಸಲಾಯಿತು ; ಎಷ್ಟು ದಿನಗಳ ಕಾಲ ನೀರನ್ನು ಹರಿಸಲಾಯಿತು; ಎಷ್ಟು ದಿನಗಳಿಂದ ಕಾಲುವೆಗಳಲ್ಲಿ ನೀರನ್ನು ಹರಿಸುತ್ತಿಲ್ಲ ; ನೀರನ್ನು ಹರಿಸದೇ ಇರಲು ಕಾರಣವೇನು ;

(ಆ) ಖಾಸಗಿಯವರ ವಿದ್ಯುತ್ ಉತ್ಪಾದನಾ ಘಟಕಕ್ಕೆ ಅನುಕೂಲ ಮಾಡುವ ಸಲುವಾಗಿ ರೈತರ ಹೊಲಗಳಿಗೆ ಕಾಲುವೆಗಳ ಮೂಲಕ ನೀರನ್ನು ಹಾಯಿಸುತ್ತಿಲ್ಲ ಎನ್ನುವ ಭಾವನೆ ರೈತರು ಹಾಗೂ ಸಾರ್ವಜನಿಕರಲ್ಲಿ ಮೂಡಿರುವುದು ಸರ್ಕಾರ ಗಮನಿಸಿದೆಯೇ; ಗಮನಿಸಿದಲ್ಲಿ, ಇದನ್ನು ಸರಿಪಡಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ; ಇಲ್ಲವಾದಲ್ಲಿ ಕಾರಣವೇನು ?

## ಎತ್ತಿನ ಹೊಳೆ ಕುಡಿಯುವ ನೀರಿನ ವಿಸ್ತೃತ ಯೋಜನಾ ವರದಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೧೭ (೪೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಎತ್ತಿನಹೊಳೆ ಕುಡಿಯುವ ನೀರಿನ ಯೋಜನೆಯ ವಿಸ್ತೃತ ಯೋಜನಾ ವರದಿ (DPR) ಯನ್ನು ತಯಾರಿಸುವಾಗ



ಯೋಜನೆಯ ಸ್ಥಳದಲ್ಲಿ ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ (WRDO) ಹಾಸನ ಇವರು ತಯಾರಿಸಿರುವ ಮಾಹಿತಿಯನ್ನು ಬಿಟ್ಟು, CWC ಬಂಟ್ವಾಶದವರು ತಯಾರಿಸಿದ ಮಾಹಿತಿಯನ್ನು ಪಡೆಯಲು ಕಾರಣವೇನು ;

(ಆ) ಎತ್ತಿನ ಹೊಳೆ ಕುಡಿಯುವ ನೀರಿನ ಯೋಜನೆಯ ವಿಸ್ತೃತ ಯೋಜನಾ ವರದಿ (DPR)ಯನ್ನು ತಯಾರಿಸುವಾಗ ಯೋಜನೆಯ ಸ್ಥಳದಲ್ಲಿ ಜಲಸಂಪನ್ಮೂಲ ಅಭಿವೃದ್ಧಿ ಸಂಸ್ಥೆ (WRDO) ಹಾಸನ ಇವರು ತಯಾರಿಸಿದ ಮಾಹಿತಿಯನ್ನು ಬಿಟ್ಟು CWC ಬಂಟ್ವಾಶದವರು ತಯಾರಿಸಿದ ಮಾಹಿತಿಯನ್ನು ಪಡೆದಿದ್ದರಿಂದ ಈ ವ್ಯತ್ಯಾಸವು ಸಂಪೂರ್ಣ ಎತ್ತಿನಹೊಳೆ ಕುಡಿಯುವ ನೀರು ಯೋಜನೆಯ ಮೇಲೆ ಪರಿಣಾಮ ಬೀರುವುದನ್ನು ಸರ್ಕಾರ ಗಮನಿಸಿದೆಯೇ ; ಗಮನಿಸದಿದ್ದಲ್ಲಿ ಗಮನಿಸಲಾಗುವುದೇ ?

## ಮೀನು ಮಾರಾಟದಲ್ಲಿ ಮಹಿಳೆಯರಿಗೆ ಪ್ರೋತ್ಸಾಹ

**ಡಾ: ಜಯಮಾಲ ರಾಮಚಂದ್ರ (ನಾಮ ನಿರ್ದೇಶನ ಹೊಂದಿದವರು) :–**

೨೧೮ (೪೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಈವರೆಗೆ ಮೀನಿನ ತಾಜಾತನ ಉಳಿಸಿ, ಮೀನು ಮಾರಾಟ ವ್ಯವಸ್ಥೆಯನ್ನು ಉತ್ತಮಗೊಳಿಸಲು ಮೀನು ಮಾರಾಟ ಮಾಡುವ ಎಷ್ಟು ಮಹಿಳೆಯರಿಗೆ ಐಸ್‌ಬಾಕ್ಸ್‌ಗಳನ್ನು ವಿತರಿಸಲಾಗಿದೆ ;

(ಆ) ಸರ್ಕಾರ ಐಸ್‌ಬಾಕ್ಸ್‌ಗಳನ್ನು ವಿತರಿಸುವ ಈ ಕಾರ್ಯಕ್ರಮವನ್ನು ಮತ್ತಷ್ಟು ಪ್ರಚಾರ ಮಾಡಿ ಮೀನು ಮಾರಾಟ ಮಾಡುವ ಮಹಿಳೆಯರಿಗೆ ಸರ್ಕಾರ ಹೆಚ್ಚಿನ ಪ್ರಮಾಣದಲ್ಲಿ ಸಹಾಯ ಮಾಡುವುದೇ ?

## ನಿರಾಶ್ರಿತರ ಪುನರ್ ವಸತಿ

**ಡಾ: ಜಯಮಾಲ ರಾಮಚಂದ್ರ (ನಾಮ ನಿರ್ದೇಶನ ಹೊಂದಿದವರು) :–**

೨೧೯ (೪೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಭಾರಿ ನೀರಾವರಿ ಯೋಜನೆಗಳಿಂದ ನಿರಾಶ್ರಿತರಾದವರಿಗೆ ಪುನರ್ವಸತಿಗಳನ್ನು ಒದಗಿಸಲು ಬಾಕಿ ಉಳಿದಿರುವ ಪ್ರಕರಣಗಳು ಎಷ್ಟು ; (ಯೋಜನಾವಾರು ವಿವರ ನೀಡುವುದು)

(ಆ) ಸರ್ಕಾರ ಬಾಕಿ ಉಳಿದ ನಿರಾಶ್ರಿತರಿಗೆ ಪುನರ್ವಸತಿ ಕಲ್ಪಿಸಿ ಕೊಡುವುದು ಯಾವಾಗ ;

(ಇ) ಒದಗಿಸಿದ ಪುನರ್ವಸತಿಗಳ ಬಗ್ಗೆ ಅತೃಪ್ತಿ, ಅಸಮಾನತೆ, ತಾರತಮ್ಯ, ಅನ್ಯಾಯ ಇತ್ಯಾದಿಗಳ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಸವಳು–ಜವಳಿ ನಿಂದ ಕೃಷಿ ಭೂಮಿ ನಾಶ

**ಶ್ರೀಮತಿ ತಾರಾಅನೂರಾಧ (ನಾಮ ನಿರ್ದೇಶನ ಹೊಂದಿದವರು) :–**

೨೨೦ (೩೧೨) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಮಲಪ್ರಭಾ ಮತ್ತು ಘಟಪ್ರಭಾ ನೀರಾವರಿ ಯೋಜನಾ ಪ್ರದೇಶಗಳ ವ್ಯಾಪ್ತಿಗಳಲ್ಲಿನ ಕೃಷಿ ಭೂಮಿ ಸವಳು–ಜವಳು ಆಗಿ



ಬೆಳೆಗಳನ್ನು ಬೆಳೆಯಲು ರೈತರಿಗೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಹೆಕ್ಟೇರ್ ಕೃಷಿ ಭೂಮಿ ಸವಳು–ಜವಳು ಆಗಿದೆ ; ಕಾರಣಗಳೇನು ;

(ಇ) ಈ ಭೂಮಿಯನ್ನು ಪುನರ್ ವ್ಯವಸಾಯಕ್ಕೆ ಯೋಗ್ಯ ಭೂಮಿಯನ್ನಾಗಿ ಪರಿವರ್ತಿಸಲು ಸಾಧ್ಯವಿದೆಯೇ ; ಸಾಧ್ಯವಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ರೈತರ ವ್ಯವಸಾಯದ ಭೂಮಿಯನ್ನು ಉಳಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಹಮ್ಮಿಕೊಂಡಿದೆ ?

## ಕ್ರೀಡಾಪಟುಗಳಿಗೆ ಪ್ರೋತ್ಸಾಹದಲ್ಲಿ ತಾರತಮ್ಯ

**ಶ್ರೀಮತಿ ತಾರಾಅನೂರಾಧ (ನಾಮ ನಿರ್ದೇಶನ ಹೊಂದಿದವರು) :–**

೨೨೧ (೪೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉತ್ತರ ಕರ್ನಾಟಕ ಜಿಲ್ಲೆಗಳಲ್ಲಿ ನೈಜ ಪ್ರತಿಭೆಗಳಿದ್ದರೂ, ವಿವಿಧ ಕ್ರೀಡಾಪಟುಗಳನ್ನು ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟಗಳಿಗೆ ಕೊಂಡೊಯ್ಯುವಲ್ಲಿ ಮೈಸೂರು ಪ್ರಾಂತ್ಯದ ಕ್ರೀಡಾಪಟುಗಳ ಮಧ್ಯೆ ತಾರತಮ್ಯಗಳನ್ನು ಮಾಡುತ್ತಿವೆ ಎಂಬ ದೂರುಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, (ವಿವರ ಒದಗಿಸುವುದು); ದೂರುಗಳ ಬಗ್ಗೆ ಕೈಗೊಂಡ ಕ್ರಮಗಳೇನು ?

## ಅಕಾಲಿಕ ಮಳೆಯಿಂದ ಹಾನಿಗೊಳಗಾದ ಬೆಳೆಗಳಿಗೆ ಪರಿಹಾರ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೨ (೧೮೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇತ್ತೀಚೆಗೆ ಬಿದ್ದಿರುವ ಅಕಾಲಿಕ ಹಾಗೂ ಆಲಿಕಲ್ಲು ಮಳೆಯಿಂದಾಗಿ ಯಾವ ಯಾವ ತಾಲ್ಲೂಕುಗಳಲ್ಲಿ ಎಷ್ಟೆಷ್ಟು ಎಕರೆ ಬೆಳೆ ಮತ್ತು ಆಸ್ತಿ–ಪಾಸ್ತಿಗಳಿಗೆ ಹಾನಿಯಾಗಿರುತ್ತದೆ; ಇದರಿಂದ ರೈತರಿಗೆ ಉಂಟಾಗಿರುವ ಒಟ್ಟು ಹಾನಿ ಎಷ್ಟು ;

(ಆ) ಸರ್ಕಾರ ಬೆಳೆ ಹಾನಿಗೆ ಈವರೆವಿಗೂ ನೀಡಿರುವ ಪರಿಹಾರ ಧನವೆಷ್ಟು ;

(ಇ) ಯಾವ ಯಾವ ತಾಲ್ಲೂಕುಗಳ, ಯಾವ ಯಾವ ಗ್ರಾಮಗಳ ಎಷ್ಟೆಷ್ಟು ರೈತರಿಗೆ ಸರ್ಕಾರ ಪರಿಹಾರ ನೀಡಿರುತ್ತದೆ; ನೀಡದಿದ್ದಲ್ಲಿ, ಸದರಿ ಪರಿಹಾರ ನೀಡಲು ಸರ್ಕಾರ ಕೈಗೊಳ್ಳುವ ಕ್ರಮಗಳೇನು ;

(ಈ) ಸರ್ಕಾರ ಈ ರೀತಿ ಬೆಳೆ ಹಾನಿಗೆ ಪರಿಹಾರ ನೀಡದಿರುವುದರಿಂದ ಎಷ್ಟು ರೈತರು ಸಂಕಷ್ಟಕ್ಕೆ ಸಿಲುಕಿರುತ್ತಾರೆ ಹಾಗೂ ಆರ್ಥಿಕ ನಷ್ಟದಿಂದ ಆತ್ಮಹತ್ಯೆ ಮಾಡಿಕೊಂಡಿರುತ್ತಾರೆ ? (ವಿವರ ಒದಗಿಸುವುದು)

## ತೆಂಗಿನ ತೋಟಗಳಿಗೆ ಪರಿಹಾರ ನೀಡುವ ಬಗ್ಗೆ

**ಶ್ರೀ ಟಿ.ಎ. ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೩ (೩೧೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆ ತುರುವೇಕೆರೆ ತಾಲ್ಲೂಕು ಮುತ್ತಗದಹಳ್ಳಿ ಸರ್ವೆ ನಂ. ೯೦–೯೧ರ ತೆಂಗಿನತೋಟಗಳಿಗೆ ಹಳ್ಳದ ಪ್ರವಾಹದಿಂದ ಆಗುತ್ತಿರುವ ಹಾನಿಯನ್ನು ತಪ್ಪಿಸಲು ೩೩ ಲಕ್ಷದಲ್ಲಿ ೨೦೧೪–೧೫ರಲ್ಲಿ ರಾಜ್ಯ ವಿಪತ್ತು ಉಪಶಮನ ನಿಧಿಯಡಿಯಲ್ಲಿ ೨೦೦ ಮೀಟರ್ ಕಲ್ಲು–ತಡೆಗೋಡೆ ನಿರ್ಮಿಸಲಾಗುವುದೆಂದು ಸರ್ಕಾರ ತಿಳಿಸಿರುವುದು ನಿಜವೇ ;



(ಆ) ಹಾಗಿದ್ದಲ್ಲಿ, ಮೇಲ್ಕಂಡ ಕ್ರಿಯಾ ಯೋಜನೆಗೆ ಜಿಲ್ಲಾಧಿಕಾರಿಯವರು ಅನುಮೋದನೆ ನೀಡಿರುತ್ತಾರೆಯೇ ; ಇಲ್ಲವಾದಲ್ಲಿ, ಅದರ ವಿಳಂಬಕ್ಕೆ ಕಾರಣಗಳೇನು ; (ಪೂರ್ಣ ಮಾಹಿತಿ ನೀಡುವುದು)

(ಇ) ಸದರಿ ಕಾಮಗಾರಿಗೆ ಮೇಲ್ಕಂಡ ಅನುಮೋದನೆ ನಂತರ ಸರ್ಕಾರದ ಅನುಮೋದನೆಗೆ ಅನುಸರಿಸಬೇಕಾದ ನೀತಿ ನಿಯಮಗಳಾವುವು ;

(ಈ) ಕಾಮಗಾರಿ ಪ್ರಾರಂಭಿಸಿ ರೈತರಿಗೆ ಆಗುತ್ತಿರುವ ಹಾನಿ ತಪ್ಪಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸರ್ಕಾರ ನೀಡುವ ನಿರ್ದೇಶನವೇನು ?

## ವಿಧವಾ ಮತ್ತು ವೃದ್ಧಾಪ್ಯ ಮಾಸಾಶನ ವಿಳಂಬವಾಗುತ್ತಿರುವುದು

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೨೪ (೧೮೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಧವಾ ಮತ್ತು ವೃದ್ಧಾಪ್ಯ ಫಲಾನುಭವಿಗಳಿಗೆ ಮಾಸಾಶನ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರವು ಮಾಸಾಶನವನ್ನು ಎಷ್ಟು ತಿಂಗಳಿಗೊಮ್ಮೆ ನೀಡುತ್ತಿದೆ ;

(ಇ) ಪ್ರತಿ ಮಾಹೆಯ ಮಾಸಾಶನವನ್ನು ೫ನೇ ತಾರೀಖಿನೊಳಗಾಗಿ ನೀಡಲು ಸರ್ಕಾರಕ್ಕಿರುವ ತೊಂದರೆಗಳೇನು ?

## ಬಾಲ ಕಾರ್ಮಿಕರ ಪದ್ಧತಿ ತಡೆಯುವ ಬಗ್ಗೆ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೫ (೪೩೯) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಾಲ ಕಾರ್ಮಿಕರು ಹೆಚ್ಚಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಗಳಲ್ಲಿ ಬಾಲ ಕಾರ್ಮಿಕರನ್ನು ಗುರುತಿಸಲಾಗಿದೆ ; (ಮಾಹಿತಿ ನೀಡುವುದು)

(ಇ) ಬಾಲ ಕಾರ್ಮಿಕರ ಪದ್ಧತಿಯನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಮಾಹಿತಿ ನೀಡುವುದು)

## ಅರಣ್ಯ ಭೂಮಿ ಒತ್ತುವರಿ

**ಶ್ರೀ ಬಿ. ರಾಮಕೃಷ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨೬ (೧೮೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒತ್ತುವರಿಯಾಗಿರುವ ಅರಣ್ಯ ಭೂಮಿ ಎಷ್ಟು ;

(ಆ) ಹಾಗಿದ್ದಲ್ಲಿ, ಒತ್ತುವರಿಯನ್ನು ತಪ್ಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯ ನೌಕರರ ಕುರಿತು

**ಶ್ರೀ ವಿ. ಸೋಮಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೭ (೧೮೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಇಲಾಖೆಯಲ್ಲಿರುವ ಗುತ್ತಿಗೆ ಹಂಗಾಮಿ ಹೊರಗುತ್ತಿಗೆ ಹಾಗೂ ದಿನಗೂಲಿ ನೌಕರರ ಸಂಖ್ಯೆ ಎಷ್ಟು ; ರಾಜ್ಯದ ಎಲ್ಲಾ ವನ್ಯಜೀವಿಧಾಮಗಳವಾರು ವಿವರ ಒದಗಿಸುವುದು ;



(ಆ) ಸದರಿ ನೌಕರರು ನಿರ್ವಹಿಸುತ್ತಿರುವ ಕರ್ತವ್ಯಗಳೇನು ; ಇವರಿಗೆ ನೀಡುವ ವೇತನ ಹಾಗೂ ದಿನಗೂಲಿ ವೇತನ ಎಷ್ಟು ; ಈ ಹಣವನ್ನು ಸಮರ್ಪಕವಾಗಿ ಸರಿಯಾದ ಸಮಯಕ್ಕೆ ವಿತರಿಸದಿರುವ ವಿಚಾರ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ವೇತನ, ಕೂಲಿ ನೀಡುವಲ್ಲಿ ವಿಳಂಬ ಧೋರಣೆ ಅನುಸರಿಸುತ್ತಿರುವ ಅಧಿಕಾರಿ ಅಥವಾ ಗುತ್ತಿಗೆದಾರರ ಮೇಲೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಈ) ಇಂತಹ ನೌಕರರು ಐದಾರು ತಿಂಗಳಿಂದ ಕೂಲಿ ಇಲ್ಲದೇ ಕೆಲಸ ನಿರ್ವಹಿಸುತ್ತಿರುವ ಬಗ್ಗೆ ಸರ್ಕಾರದ ನಿಲುವೇನು ;

(ಉ) ಸದರಿ ದಿನಗೂಲಿ ನೌಕರರುಗಳು, ಅಧಿಕಾರಿ, ಗುತ್ತಿಗೆದಾರರ ಮರ್ಜಿಯಲ್ಲಿರುವಂತೆ ಮಾಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ; ವೇತನವನ್ನು ನೇರವಾಗಿ ನೌಕರರಿಗೆ ಸಂದಾಯವಾಗುವಂತೆ ಮಾಡದಿರಲು ಕಾರಣಗಳೇನು ?

## ನವಿಲೂರು ಕೆರೆಯನ್ನು ಅತಿಕ್ರಮಿಸಿರುವ ಬಗ್ಗೆ

**ಶ್ರೀ ಬಸವರಾಜ ಹೊರಟ್ಟಿ (ಶಿಕ್ಷಕರ ಕ್ಷೇತ್ರ) :–**

೨೨೮ (೧೮೯) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಬ್ಬಳ್ಳಿ–ಧಾರವಾಡ ಮಧ್ಯದ ನವಿಲೂರಿನಲ್ಲಿರುವ ನೀರಾವರಿ ಕೆರೆಯನ್ನು ಯಾವ ದಿನಾಂಕದಂದು ನಿರ್ಮಿಸಲಾಗಿದೆ ; ಅದರ ಒಟ್ಟು ವಿಸ್ತೀರ್ಣ ಎಷ್ಟು ; ಎಕರೆ ಹಾಗೂ ನೀರಿನ ಸಂಗ್ರಹಣಾ ಸಾಮರ್ಥ್ಯವೆಷ್ಟು ;

(ಆ) ಸದರಿ ಕೆರೆಯನ್ನು ಅತಿಕ್ರಮಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ, ಅತಿಕ್ರಮಿಸಿರುವ ಕೆರೆಯ ವಿಸ್ತೀರ್ಣ ಎಷ್ಟು ; (ಅತಿಕ್ರಮಕಾರರ ವಿವರ ಒದಗಿಸುವುದು)

(ಇ) ಅತಿಕ್ರಮಣ ಮಾಡಿಕೊಂಡಿರುವ ಜಾಗವನ್ನು ತೆರವುಗೊಳಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## "ಅಮೃತ" ಯೋಜನೆಯ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೨೯ (೩೦೭) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕಾ ಇಲಾಖಾ ವತಿಯಿಂದ ಜಾರಿಗೆ ತಂದಿರುವ "ಅಮೃತ" ಯೋಜನೆ ಜಾರಿಯಲ್ಲಿದೆಯೇ ;

(ಆ) ಹಾಗಿದ್ದಲ್ಲಿ, ಈ ಯೋಜನೆಗೆ ಮೀಸಲಿಟ್ಟಿರುವ ಹಣ ಎಷ್ಟು; ಖರ್ಚಾದ ಹಣ ಎಷ್ಟು ; ಈ ಯೋಜನೆ ಅಡಿಯಲ್ಲಿ ಎಷ್ಟು ಫಲಾನುಭವಿಗಳಿಗೆ ಸೌಲಭ್ಯ ನೀಡಲಾಗಿದೆ ? (ವಿವರ ನೀಡುವುದು)

## ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ಪಂಗಡದವರ ಕ್ರೀಡಾಭಿವೃದ್ಧಿ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೦ (೩೦೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ವತಿಯಿಂದ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದವರ ಕ್ರೀಡಾ ಅಭಿವೃದ್ಧಿಗಾಗಿ ಮೀಸಲಿಟ್ಟ ಹಣ ಎಷ್ಟು ;



(ಆ) ಆ ಪೈಕಿ ಖರ್ಚಾಗಿರುವ ಹಣ ಎಷ್ಟು ; ಯಾವ ಯಾವ ಕಾರ್ಯಕ್ರಮಗಳಿಗೆ ಈ ಹಣವನ್ನು ಖರ್ಚು ಮಾಡಲಾಗಿದೆ ;

(ಇ) ಖರ್ಚಾಗದೆ ಬಾಕಿ ಉಳಿದಿರುವ ಹಣ ಎಷ್ಟು ?

## ಪರಿಶಿಷ್ಟ ಜಾತಿ / ಪರಿಶಿಷ್ಟ ವರ್ಗದ ಮೀನುಗಾರರಿಗೆ ವಸತಿ ಸೌಲಭ್ಯ

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೧ (೩೦೮) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೀನುಗಾರಿಕೆ ಇಲಾಖಾ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಮೀನುಗಾರರಿಗೆ ಸರ್ಕಾರ ಜಾರಿಗೆ ತಂದ ಕಾರ್ಯಕ್ರಮಗಳು ಯಾವುವು ;

(ಆ) ಮೀಸಲಿಟ್ಟ ಹಣ ಎಷ್ಟು; ಖರ್ಚಾದ ಹಣ ಎಷ್ಟು ;

(ಇ) ಈ ಇಲಾಖೆ ವತಿಯಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದ ಮೀನುಗಾರರಿಗೆ ವಸತಿ ಸೌಲಭ್ಯ ನೀಡುವ ಕಾರ್ಯಕ್ರಮ ಜಾರಿಯಲ್ಲಿದೆಯೇ ;

(ಈ) ೨೦೧೩–೧೪ ಮತ್ತು ೨೦೧೪–೨೦೧೫ನೇ ಸಾಲಿನಲ್ಲಿ ಎಷ್ಟು ಮಂದಿ ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗದವರಿಗೆ ವಸತಿ ಸೌಲಭ್ಯ ಕಲ್ಪಿಸಲಾಗಿದೆ ;

(ಉ) ಯಾವ ಯಾವ ಜಿಲ್ಲೆಗಳಲ್ಲಿ ಎಷ್ಟೆಷ್ಟು ಮನೆಗಳನ್ನು ನೀಡಲಾಗಿದೆ ?

## ಕಾರ್ಮಿಕ ಇಲಾಖೆ ವತಿಯಿಂದ SCP ಅಡಿಯಲ್ಲಿ SC/ST ಯವರಿಗೆ ನೀಡಿರುವ ಸೌಲಭ್ಯದ ಕುರಿತು

**ಶ್ರೀ ಡಿ.ಎಸ್. ವೀರಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೩೨ (೩೧೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕ ಇಲಾಖೆ ವತಿಯಿಂದ ವಿಶೇಷ ಘಟಕ ಯೋಜನೆ ಅಡಿಯಲ್ಲಿ ಪರಿಶಿಷ್ಠ ಜಾತಿ ಮತ್ತು ಪರಿಶಿಷ್ಠ ವರ್ಗದವರಿಗಾಗಿ ಜಾರಿಯಲ್ಲಿರುವ ಕಾರ್ಯಕ್ರಮಗಳು ಯಾವುವು ;

(ಆ) ೨೦೧೩–೧೪, ೨೦೧೪–೧೫ನೇ ಸಾಲಿನಲ್ಲಿ ಈ ವರ್ಗದವರಿಗೆ ವಿಶೇಷ ಘಟಕ ಯೋಜನೆ (SCP/STP) ಅಡಿಯಲ್ಲಿ ಮೀಸಲಿಟ್ಟ ಹಣ ಎಷ್ಟು ; ಖರ್ಚಾಗಿರುವ ಹಣ ಎಷ್ಟು ; ಮಾರ್ಚ್ ಅಂತ್ಯದವರೆಗೆ ಖರ್ಚಾಗದೇ ಉಳಿದಿರುವ ಹಣ ಎಷ್ಟು; ಖರ್ಚಾಗದೇ ಉಳಿದಿರುವ ಹಣವನ್ನು ಮುಂದಿನ ವರ್ಷಕ್ಕೆ ಉಪಯೋಗಿಸಲಾಗುವುದೇ ?

## CRZ ಇಲಾಖೆಯಲ್ಲಿನ ಹುದ್ದೆ ಖಾಲಿ ಇರುವ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೩ (೩೧೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲೆಯ ಪ್ರಾದೇಶಿಕ ನಿರ್ದೇಶಕರ ಕಛೇರಿ (ಪರಿಸರ) CRZ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡದೇ ಇರಲು ಕಾರಣಗಳೇನು ;



(ಆ) ಕಳೆದ ೮ ತಿಂಗಳಿಂದ CRZ ಇಲಾಖೆಯ ಪ್ರಾದೇಶಿಕ ನಿರ್ದೇಶಕ ಹುದ್ದೆ ಖಾಲಿಯಿರುವುದರಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಹೌದಾದಲ್ಲಿ ಸರ್ಕಾರ ನಿರ್ಲಕ್ಷ್ಯ ವಹಿಸಲು ಕಾರಣವೇನು ;

(ಇ) ಕಳೆದ ೧ ವರ್ಷದಲ್ಲಿ CRZ ವಲಯದ ನಿರಪೇಕ್ಷಣಾ ಪತ್ರ ಕೋರಿ ಸ್ವೀಕೃತವಾದ ಅರ್ಜಿಗಳೆಷ್ಟು ; ವಿಲೇವಾರಿ ಮಾಡಿದ ಅರ್ಜಿಗಳೆಷ್ಟು ; (ಜಿಲ್ಲಾವಾರು ತಿಂಗಳುವಾರು, ನಿರಪೇಕ್ಷಣಾ ನಿರಾಕರಿಸಿರುವ ಅರ್ಜಿಗಳ ಮಾಹಿತಿ ಒಳಗೊಂಡಂತೆ ವಿವರ ನೀಡುವುದು) ;

(ಈ) ಕರಾವಳಿ ತೀರ ಪ್ರದೇಶಗಳಲ್ಲಿ ವಾಸಿಸುವ ಜನರಿಗೆ CRZ ಕಾಯ್ದೆಯಿಂದ ಉಂಟಾಗುತ್ತಿರುವ ಸಮಸ್ಯೆಯ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕೇಂದ್ರ ಸರ್ಕಾರಕ್ಕೆ ಸಲ್ಲಿಸಿರುವ ಪ್ರಸ್ತಾವನೆಗಳ ಸಂಪೂರ್ಣ ವಿವರ ನೀಡುವುದು ?

## ಅರಣ್ಯೀಕರಣಕ್ಕೆ ಪ್ರೋತ್ಸಾಹ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೪ (೩೧೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅರಣ್ಯ ಪ್ರದೇಶ ಎಷ್ಟು ; (ಜಿಲ್ಲಾವಾರು ವಿಸ್ತೀರ್ಣದ ಸಂಪೂರ್ಣ ವಿವರ ನೀಡುವುದು)

(ಆ) ಗ್ರಾಮಪಂಚಾಯತ್ ಮತ್ತು ನಗರ ಸ್ಥಳೀಯ ಸಂಸ್ಥೆಯ ವ್ಯಾಪ್ತಿಯಲ್ಲಿ ಗಿಡ ನೆಡುವ, ಅರಣ್ಯೀಕರಣ ಪ್ರೋತ್ಸಾಹ ಯೋಜನೆಗಳಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ಅರಣ್ಯ ಇಲಾಖೆಯಲ್ಲಿ ಮಂಜೂರಾಗಿರುವ ವಿವಿಧ ವೃಂದವಾರು ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಈ) ಅರಣ್ಯ ಇಲಾಖೆಯ ಯೋಜನೆಗಳನ್ನು ಜನರಿಗೆ ತಲುಪಿಸಲು ಸರ್ಕಾರ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಉ) ರಾಜ್ಯದಲ್ಲಿ ಅರಣ್ಯ ಭೂಮಿ ಹಕ್ಕು ಕಾಯಿದೆ ಅನುಷ್ಠಾನದ ಬಗ್ಗೆ ಕೈಗೊಂಡ ಕ್ರಮವೇನು ? (ವಿವರ ನೀಡುವುದು)

## ಮಿನಿ ವಿಧಾನಸೌಧದ ಬಗ್ಗೆ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೫ (೩೧೬) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ತಾಲ್ಲೂಕಿನ ಮಿನಿ ವಿಧಾನಸೌಧ ಕಟ್ಟಡಕ್ಕೆ ಮಂಜೂರಾತಿ ದೊರೆತಿದ್ದು ಯಾವಾಗ ; ಸದರಿ ಕಾಮಗಾರಿ ಆರಂಭಗೊಂಡಿದ್ದು ಯಾವಾಗ ; ಕಾಮಗಾರಿ ವಿಳಂಬಕ್ಕೆ ಕಾರಣವೇನು ; ಗುತ್ತಿಗೆದಾರರು ಯಾರು ; ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಮುಕ್ತಾಯಗೊಳಿಸಲು ಉದ್ದೇಶಿಸಲಾಗಿದೆ ; (ವಿವರ ನೀಡುವುದು)

(ಆ) ಸದರಿ ಕಟ್ಟಡ ನಿರ್ಮಾಣಕ್ಕೆ ಮಂಜೂರಾದ ಒಟ್ಟು ಅನುದಾನವೆಷ್ಟು; ಯೋಜನಾ ವೆಚ್ಚವೆಷ್ಟು ; ಸದರಿ ಕಾಮಗಾರಿಯನ್ನು ಯಾವಾಗ ಪೂರ್ಣಗೊಳಿಸಲಾಗುವುದು ; ಸಾರ್ವಜನಿಕ ಸೇವೆಗೆ ಮುಕ್ತಗೊಳಿಸುವುದು ಯಾವಾಗ ? (ವಿವರ ನೀಡುವುದು)



## ಸಣ್ಣ ನೀರಾವರಿ ಕೆರೆಗಳ ನಿರ್ಮಾಣ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೬ (೩೧೭) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ "ಸಣ್ಣ ನೀರಾವರಿ" ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಕೆರೆಗಳು ಯಾವುವು ; (ಹೆಸರು ಮತ್ತು ವಿಸ್ತೀರ್ಣದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಆ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಲ್ಲಿ ಕೆರೆ, ಕಾಲುವೆ, ಸಣ್ಣ ಅಣೆಕಟ್ಟುಗಳು ಮತ್ತು ಇತರೆ ನಿರ್ಮಾಣ ಮತ್ತು ನಿರ್ವಹಣೆ ಕಾಮಗಾರಿಗೆ ಮಂಜೂರಾಗಿರುವ ಅನುದಾನವೆಷ್ಟು ; (ಕಾಮಗಾರಿಯ ಸಂಪೂರ್ಣ ವಿವರ ನೀಡುವುದು)

(ಇ) ಸಣ್ಣ ನೀರಾವರಿ ಇಲಾಖೆಯ ಮೂಲಕ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳಾವುವು ; (ಸಂಪೂರ್ಣ ವಿವರ ಮತ್ತು ಮಾರ್ಗಸೂಚಿ ನೀಡುವುದು)

(ಈ) ಸಣ್ಣ ನೀರಾವರಿ ಇಲಾಖೆಯ ಮೂಲಕ ಕೊಳವೆ ಬಾವಿ, ಸಣ್ಣ ತೆರೆದ ಬಾವಿ ನಿರ್ಮಾಣಕ್ಕೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆಯೇ ? (ಮಾರ್ಗಸೂಚಿಗಳ ವಿವರ ನೀಡುವುದು)

## ಜವಳಿ ಇಲಾಖೆಯ ಕಾರ್ಯಕ್ರಮ

**ಶ್ರೀ ಕೋಟ ಶ್ರೀನಿವಾಸ ಪೂಜಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩೭ (೩೧೮) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜವಳಿ ಇಲಾಖೆಯಿಂದ ಅನುಷ್ಠಾನಗೊಳ್ಳುತ್ತಿರುವ ಕಾರ್ಯಕ್ರಮ ಮತ್ತು ಯೋಜನೆಗಳಾವುವು; (ಸಂಪೂರ್ಣ ವಿವರ ನೀಡುವುದು)

(ಆ) ಬಿ.ಪಿ.ಎಲ್. ಕುಟುಂಬಗಳಿಗೆ ಉಚಿತ ಬಟ್ಟೆ ನೀಡುವ ಯೋಜನೆ ಸರ್ಕಾರದ ಮುಂದಿರುವುದು ನಿಜವೇ; ಹೌದಾದಲ್ಲಿ, ಯೋಜನೆಯ ಸಂಪೂರ್ಣ ವಿವರ ಮತ್ತು ಅರ್ಹತೆಯ ಮಾನದಂಡದ ವಿವರಗಳೇನು;

(ಇ) ಇಲ್ಲವಾದಲ್ಲಿ, ರಾಜ್ಯದ ಬಡವರಿಗೆ ಉಚಿತ ಬಟ್ಟೆ ನೀಡಲು ಸರ್ಕಾರಕ್ಕಿರುವ ತೊಡಕುಗಳೇನು; (ವಿವರ ನೀಡುವುದು)

(ಈ) ರಾಜ್ಯದಲ್ಲಿರುವ ಕೈಮಗ್ಗ ಮತ್ತು ವಿದ್ಯುತ್ ಮಗ್ಗ ನೇಕಾರರು ಮತ್ತು ನೇಕಾರ ಸಂಘಗಳ ಪುನಶ್ಚೇತನಕ್ಕೆ ಮತ್ತು ಅದರ ಅಭಿವೃದ್ಧಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡುವುದು)

## ಚೆಟ್ಟಿನಾಡು ಸಿಮೆಂಟ್ ಕಾರ್ಖಾನೆ ಮತ್ತು ಅರಣ್ಯ ಪ್ರದೇಶದ ಅಂತರ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೩೮ (೩೧೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಂಚೋಳಿ ತಾಲ್ಲೂಕಿನಲ್ಲಿ ಚೆಟ್ಟಿನಾಡು ಸಿಮೆಂಟ್ ಕಾರ್ಖಾನೆ ಸ್ಥಾಪನೆಗೊಂಡಿದ್ದು ಅರಣ್ಯ ಇಲಾಖೆಯಿಂದ ಎನ್.ಓ.ಸಿ ನೀಡಿದ್ದು ಯಾವಾಗ; (ದಿನಾಂಕ ಹಾಗೂ ಪ್ರಮಾಣ ಪತ್ರದ ಪ್ರತಿ ಒದಗಿಸುವುದು)



(ಆ) ಈ ಕಾರ್ಖಾನೆಗೆ ಕಾನೂನು ಉಲ್ಲಂಘನೆ ಮಾಡಿ ಎನ್.ಓ.ಸಿ. ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಬಂದಿದ್ದಲ್ಲಿ, ಸರ್ಕಾರವು ತೆಗೆದುಕೊಂಡ ಕ್ರಮವೇನು ಮತ್ತು ಉಲ್ಲಂಘಿಸಿದ ಅಧಿಕಾರಿಗಳು ಯಾರು ಯಾರು; ಸಂಬಂಧಪಟ್ಟವರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಈ) ಚೆಟ್ಟಿನಾಡು ಸಿಮೆಂಟ್ ಕಾರ್ಖಾನೆ ಹಾಗೂ ಅರಣ್ಯ ಪ್ರದೇಶಕ್ಕೆ ಇರುವ ಅಂತರವೆಷ್ಟು; ಹಾಗೂ ಚೆಟ್ಟಿನಾಡು ಶಾಖೆಯ ಮತ್ತು ಹತ್ತಿರದ ಅರಣ್ಯ ಪ್ರದೇಶದ ಜಿ.ಪಿ.ಎಸ್ ರೀಡಿಂಗ್ ಅಂತರ ಎಷ್ಟು? (ಮಾಹಿತಿ ನೀಡುವುದು)

## ಅರಣ್ಯ ಇಲಾಖೆಯಲ್ಲಿ ಎಂ.ಆರ್.ಆಧಾರಿತ ದಿನಗೂಲಿ ನೌಕರರನ್ನು ಖಾಯಂಗೊಳಿಸುವ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೯ (೩೨೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ (ಎಂ.ಆರ್) ಆಧಾರಿತ ದಿನಗೂಲಿ ನೌಕರರನ್ನು ಖಾಯಂಗೊಳಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಒಟ್ಟು ಎಷ್ಟು ಜನರನ್ನು ಖಾಯಂಗೊಳಿಸಲಾಗಿದೆ ; ಖಾಯಂಗೊಳಿಸಲಾಗದ ನೌಕರರ ಸಂಖ್ಯೆ ಎಷ್ಟು ; ಇದಕ್ಕೆ ಕಾರಣವೇನು ; (ಪೂರ್ಣ ಮಾಹಿತಿ ನೀಡುವುದು)

(ಇ) ಖಾಯಂಗೊಳಿಸಲಾದ ನೌಕರರನ್ನು ಯಾವ ಕೆಲಸಗಳ ಮೇಲೆ ನಿಯೋಜಿಸಲಾಗಿದೆ? (ಸಂಪೂರ್ಣ ವಿವರ ನೀಡುವುದು)

## ಆಸ್ತಿ ಹೊಣೆಗಾರಿಕೆ ಪಟ್ಟಿಯನ್ನು ಸಲ್ಲಿಸದಿರುವ ಅಧಿಕಾರಿಗಳ ಬಗ್ಗೆ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೦ (೩೨೧) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಂದಾಯ ಇಲಾಖೆಯಲ್ಲಿ ತಹಶೀಲ್ದಾರ ಗ್ರೇಡ್ –೧ ಮತ್ತು ತಹಶೀಲ್ದಾರ್ ಗ್ರೇಡ್–೨ ವೃಂದದ ಅಧಿಕಾರಿಗಳು ಆಸ್ತಿ ಹೊಣೆಗಾರಿಕೆ ಪಟ್ಟಿಯನ್ನು ಸಲ್ಲಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಎಷ್ಟು ಮಂದಿ ತಹಶೀಲ್ದಾರ ವೃಂದದ ಅಧಿಕಾರಿಗಳು ಆಸ್ತಿ ಹೊಣೆಗಾರಿಕೆಯನ್ನು ಇದುವರೆಗೂ ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ ; ಇದಕ್ಕೆ ಕಾರಣವೇನು ; (ಅಧಿಕಾರಿಗಳ ವಿವರ ನೀಡುವುದು)

(ಇ) ಆಸ್ತಿ ಹೊಣೆಗಾರಿಕೆ ಪಟ್ಟಿಯನ್ನು ಇದುವರೆಗೂ ಸರ್ಕಾರಕ್ಕೆ ಸಲ್ಲಿಸದ ತಹಶೀಲ್ದಾರರ ವಿರುದ್ಧ ನಿಯಮಾನುಸಾರ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದೇ ? (ವಿವರ ನೀಡುವುದು)



## ಹೊಸ ಕೆರೆಗಳ ನಿರ್ಮಾಣ

**ಶ್ರೀ ರಘುನಾಥ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು):–**

೨೪೧ (೩೨೦) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೧೦ ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯ ವತಿಯಿಂದ ಯಾವುದಾದರೂ ಹೊಸ ಕೆರೆಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಆ) ಸದರಿ ಕೆರೆಗಳ ನಿರ್ಮಾಣಕ್ಕಾಗಿ ಅಂದಾಜಿಸಲಾಗಿರುವ ಒಟ್ಟು ವೆಚ್ಚ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಮಳೆ ಹಾನಿ ಪರಿಹಾರ ನೀಡುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೨ (೩೨೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾಸನ ಜಿಲ್ಲೆಯಲ್ಲಿ ಮುಂಗಾರು ಪೂರ್ವ ಮಳೆ ಗಾಳಿಯಿಂದ ಅಪಾರ ಪ್ರಮಾಣದ ಹಾನಿಯಾಗಿರುವ ಬಗ್ಗೆ ಸರ್ಕಾರಕ್ಕೆ ವರದಿ ಬಂದಿದೆಯೇ;

(ಆ) ಹಾಸನ, ಅರಸೀಕೆರೆ, ಚನ್ನರಾಯಪಟ್ಟಣ ತಾಲ್ಲೂಕುಗಳಲ್ಲಿ ಧಾರಾಕಾರ ಮಳೆಯಿಂದ ತೆಂಗಿನ ಮರಗಳು ಧರೆಗುರುಳಿ ಲಕ್ಷಾಂತರ ಮೌಲ್ಯದ ಆಸ್ತಿಪಾಸ್ತಿ ಹಾನಿಯಾಗಿದ್ದು, ಈ ಸಂಬಂಧ ಜಿಲ್ಲಾಡಳಿತದಿಂದ ವರದಿ ಪಡೆದು ಪರಿಹಾರ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಧಾರಕಾರ ಮಳೆಯಿಂದ ಅನೇಕ ಕಡೆಗಳಲ್ಲಿ ಮನೆ ಆಸ್ತಿಗಳಿಗೆ ಅಪಾರ ಹಾನಿಯಾಗಿದ್ದು, ತುರ್ತು ಪರಿಹಾರ ನೀಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಹೇಮಾವತಿ ಬಲದಂಡೆ ಕಾಲುವೆ ದುರಸ್ಥಿ ಮಾಡುವ ಕುರಿತು

**ಶ್ರೀ ಪಟೇಲ್ ಶಿವರಾಂ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೩ (೩೨೪) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೇಮಾವತಿ ಜಲಾಶಯ ಹಿನ್ನೀರಿನಿಂದ ಕೃಷಿ ಜಮೀನಿಗೆ ನೀರೊದಗಿಸುವ ಬಲ ಮೇಲ್ದಂಡೆ ನಾಲೆ ನಿರ್ಮಾಣಗೊಂಡು ಎಷ್ಟು ವರ್ಷಗಳಾಗಿದೆ;

(ಆ) ನಾಲೆಗಳು ದುರಸ್ತಿಗೆ ಒಳಗಾಗುವ ಹಂತಕ್ಕೆ ಬಂದಿದ್ದು, ಹೆಚ್ಚು ನೀರು ಹರಿಸಲು ಸಾಧ್ಯವಾಗುತ್ತಿಲ್ಲವಾದ್ದರಿಂದ ರೈತರಿಗೆ ಆಗುತ್ತಿರುವ ನಷ್ಟವನ್ನು ತಪ್ಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಬಲ ಮೇಲ್ದಂಡೆ ಕಾಲುವೆಯ ನಿರ್ವಹಣೆಗೆ ಈವರೆಗೆ ಮಾಡಿರುವ ಒಟ್ಟು ವೆಚ್ಚವೆಷ್ಟು;

(ಈ) ಬಲ ಮೇಲ್ದಂಡೆ ವ್ಯಾಪ್ತಿಯಲ್ಲಿ ಬರುವ ವಿತರಣೆ, ಉಪನಾಲೆಗಳು ಸಂಪೂರ್ಣ ಹಾಳಾಗಿದ್ದು ನಾಲೆಗಳ ಆಧುನೀಕರಣ ಅಥವಾ ದುರಸ್ತಿಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?



## ಅಸಂಘಟಿತ ಕಾರ್ಮಿಕರಿಗೆ ಗುರುತಿನ ಚೀಟಿ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೪೪ (೩೨೭) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅಸಂಘಟಿತ ಕಾರ್ಮಿಕರಿಗೆ ಗುರುತಿನ ಚೀಟಿ ಮಾಡಿಸಲು, ಡ್ರೈವರ್‌ಗಳು ಅಪಘಾತದ ಇನ್ಸೂರೆನ್ಸ್ ಮಾಡಿಸಲು ಅವಕಾಶವಿದೆಯೇ ;

(ಆ) ಅವಕಾಶವಿದ್ದಲ್ಲಿ, ಬೆಂಗಳೂರಿನಲ್ಲಿ ಯಾವ ಯಾವ ಕಡೆಗಳಲ್ಲಿ ಕೇಂದ್ರಗಳನ್ನು ತೆರೆಯಲಾಗಿದೆ ;

(ಇ) ಇಡೀ ಬೆಂಗಳೂರಿನಲ್ಲಿ ಒಂದೇ ಕೇಂದ್ರವನ್ನು ತೆರೆಯಲಾಗಿರುವುದು ನಿಜವೇ ; ಇದಕ್ಕೆ ಕಾರಣವೇನು ;

(ಈ) ಕಾರ್ಮಿಕರಿಗೆ ಮತ್ತು ವಾಹನ ಚಾಲಕರಿಗೆ ತೊಂದರೆ ತಪ್ಪಿಸಲು ಬೇರೆ ಬೇರೆ ಕಡೆ ಕೇಂದ್ರಗಳನ್ನು ತೆರೆಯಲು ಯಾವ ರೀತಿ ಸೂಕ್ತ ಕ್ರಮ ಕೈಗೊಳ್ಳಲಾಗುವುದು ?

## ತುಂಗಭದ್ರಾ ನದಿಯಿಂದ ದಾವಣಗೆರೆಗೆ ಏತ ನೀರಾವರಿಯಡಿ ನೀರು ಒದಗಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೪೫ (೩೨೫) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಾವಣಗೆರೆ ಜಿಲ್ಲೆಯ ಜಗಳೂರು, ಮಾಯಕೊಂಡ ಮತ್ತು ದಾವಣಗೆರೆ ತಾಲ್ಲೂಕುಗಳ ಕೆರೆಗಳಿಗೆ ತುಂಗಭದ್ರಾ ನದಿಯಿಂದ

ಏತ ನೀರಾವರಿಯಡಿ ನೀರು ತರುವ ಕಾಮಗಾರಿಯು ಪ್ರಾರಂಭವಾಗಿದೆಯೇ ; (ವಿವರ ನೀಡುವುದು)

(ಆ) ಈ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದ್ದಲ್ಲಿ, ಪೂರ್ಣಗೊಳಿಸಲು ಬೇಕಾಗುವ ಕಾಲಾವಧಿ ಏನು ?

## ಬಂಡಿಪುರ ಅಭಯಾರಣ್ಯದಲ್ಲಿ ಸಿಬ್ಬಂದಿ ಕೊರತೆ

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೪೬ (೩೨೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದೇಶದ ಇತರೆ ಹುಲಿಧಾಮಗಳಿಗೆ ಹೋಲಿಸಿದರೆ, ಬಂಡೀಪುರ ಹುಲಿಧಾಮದ ವಿಶೇಷತೆಗಳೇನು; ಈ ಹುಲಿಧಾಮದ ವ್ಯಾಪ್ತಿ, ವಲಯ, ಹುಲಿಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಈ ಹುಲಿಧಾಮವನ್ನು ಸಮರ್ಪಕವಾಗಿ ನಿರ್ವಹಿಸಲು ಈಗಾಗಲೇ ಮಂಜೂರಾಗಿರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)

(ಇ) ಮಂಜೂರಾಗಿರುವ ಹುದ್ದೆಗಳಲ್ಲಿ ಹಾಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಹುದ್ದೆವಾರು ವಿವರ ನೀಡುವುದು)

(ಈ) ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಸಿಬ್ಬಂದಿಗಳನ್ನು ಹೆಚ್ಚಿಸುವ ಬಗ್ಗೆ ಸರ್ಕಾರದ ನಿಲುವೇನು ಹಾಗೂ ತೆಗೆದುಕೊಳ್ಳಲಾಗುವ ಕ್ರಮವೇನು?



## ಖಾಸಗಿ ಕಂಪನಿಗಳಿಂದ ಅರಣ್ಯ ಇಲಾಖೆಗೆ ಬರಬೇಕಾಗಿರುವ ಅರಣ್ಯ ಅಭಿವೃದ್ಧಿ ತೆರಿಗೆ ಬಾಕಿ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೪೭ (೩೨೮) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಖಾಸಗಿ ಕಂಪನಿಗಳಿಂದ ಅರಣ್ಯ ಇಲಾಖೆಗೆ ಅರಣ್ಯ ಅಭಿವೃದ್ಧಿ ತೆರಿಗೆ ಬಾಕಿ ಬರಬೇಕಾಗಿರುವುದು ನಿಜವೇ ;

(ಆ) ನಿಜವಾಗಿದ್ದಲ್ಲಿ, ಒಂದು ಕೋಟಿಗೂ ಮೇಲ್ಪಟ್ಟು ನೀಡಬೇಕಾಗಿರುವ ಕಂಪನಿಗಳು ಯಾವುವು ; (ಅವುಗಳ ಬಾಕಿ ಮೊತ್ತದ ವಿವರ ನೀಡುವುದು)

(ಇ) ಬಾಕಿ ವಸೂಲಿಯ ಸಂಬಂಧ ಯಾವ ರೀತಿಯ ಕ್ರಮಕೈಗೊಳ್ಳಲಾಗಿದೆ ;

(ಈ) ಇದುವರೆಗೂ ತೆರಿಗೆ ಪಾವತಿಸದಿರುವ ಕಂಪನಿಗಳ ವಿರುದ್ಧ ಯಾವ ರೀತಿಯ ಕಠಿಣ ಕ್ರಮಕೈಗೊಳ್ಳಲಾಗುವುದು ?

## ಯಗಚಿ ಅಣೆಕಟ್ಟಿಯಿಂದ ಹತ್ತಿರದಲ್ಲಿರುವ ಕಳಸಾಪುರ ಶಿಂದಗೆರೆ, ಬೆಳವಾಡಿ ಗ್ರಾಮಗಳಿಗೆ ನೀರು ಹಾಯಿಸುವ ಕುರಿತು

**ಶ್ರೀ ರಾಮಚಂದ್ರಗೌಡ (ಪದವೀಧರರ ಕ್ಷೇತ್ರ) :–**

೨೪೮ (೩೨೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಿಕ್ಕಮಗಳೂರು ಜಿಲ್ಲೆಯ ಪೂರ್ವಭಾಗದ ಗ್ರಾಮಾಂತರ ಪ್ರದೇಶವಾದ ಕಳಸಾಪುರ, ಶಿಂದೆಗೆರೆ ಬೆಳವಾಡಿಯ ಗ್ರಾಮಗಳಿಗೂ ಯಗಚಿ ಅಣೆಕಟ್ಟಿಗೂ ಇರುವ ಅಂತರವೆಷ್ಟು ;

(ಆ) ಗ್ರಾಮಗಳು ಕೇವಲ ೧೦ ರಿಂದ ೧೨ ಕಿ.ಮೀ. ಅಂತರದಲ್ಲಿರುವುದು ನಿಜವೇ ; ಈ ಗ್ರಾಮಗಳಿಗೆ ಯಗಚಿ ಅಣೆಕಟ್ಟೆಯಿಂದ ನೀರು ಹಾಯಿಸಲು ಇರುವ ಅಡಚಣೆಗಳೇನು;

(ಇ) ಈ ಸಂಬಂಧ ಸರ್ಕಾರದ ನಿಲುವೇನು ?

## ಸೂರ್ಯ ಜ್ಯೋತಿ ರೈತರ ಬಾಳಿನ ಪರಂಜ್ಯೋತಿ ಯೋಜನೆಯ ಜಾರಿಯ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪೯ (೪೪೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) 'ಸೂರ್ಯಜ್ಯೋತಿ ರೈತರ ಬಾಳಿನ ಪರಂಜ್ಯೋತಿ' ಎಂಬ ಯೋಜನೆಯನ್ನು ಸರ್ಕಾರ ಯಾವ ವರ್ಷದಿಂದ ಜಾರಿಗೆ ತಂದಿದೆ;

(ಆ) ಈ ಯೋಜನೆಗೆ ಸರ್ಕಾರ ಪ್ರಸಕ್ತ ವರ್ಷದಲ್ಲಿ ಮತ್ತು ಹಿಂದಿನ ವರ್ಷದಲ್ಲಿ ನಿಗದಿಪಡಿಸಿದ ಅನುದಾನದ ಮೊತ್ತ ಎಷ್ಟು ;

(ಇ) ಸದ್ಯ ಈ ಯೋಜನೆಯನ್ನು ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಅನುಷ್ಠಾನಗೊಳಿಸಲಾಗಿದೆ ; (ಮಾಹಿತಿ ನೀಡುವುದು)

(ಈ) ಕೊಪ್ಪಳ ಜಿಲ್ಲೆಯಲ್ಲಿ ಈ ಯೋಜನೆಯ ಪ್ರಯೋಜನ ಪಡೆದ ರೈತರ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ನಿರ್ವಹಣಾ ಮತ್ತು ದುರಸ್ಥಿ ವೆಚ್ಚಕ್ಕಾಗಿ ಅನುದಾನ ಬಿಡುಗಡೆ



**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೦ (೩೬೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಪ್ಪಳ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಲ್ಲಿ ೨೦೧೧–೧೨ ರಿಂದ ೨೦೧೫–೧೬ನೇ ಸಾಲಿನಲ್ಲಿ ಯೋಜನೇತರ ಲೆಕ್ಕ ಶೀರ್ಷಿಕೆಯಲ್ಲಿ ನಿರ್ವಹಣಾ ಮತ್ತು ದುರಸ್ಥಿ ವೆಚ್ಚಕ್ಕಾಗಿ ಬಿಡುಗಡೆಯಾದ ಅನುದಾನ ಎಷ್ಟು ;

(ಆ) ಸದರಿ ಅನುದಾನದಲ್ಲಿ ಬಳಕೆ ಮಾಡಲಾದ, ಬಾಕಿ ಉಳಿದ ಅನುದಾನ ಎಷ್ಟು ; (ವಿವರಗಳನ್ನು ನೀಡುವುದು)

(ಇ) ಬಳಕೆ ಮಾಡಿದ ಅನುದಾನದಲ್ಲಿ ಕೈಗೊಂಡ ಕಾಮಗಾರಿಗಳು ಯಾವುವು ; (ಪ್ರಗತಿ ವರದಿಯನ್ನು ನೀಡುವುದು)

(ಈ) ಬಳಕೆ ಮಾಡದೇ ಅನುದಾನ ಬಾಕಿ ಉಳಿಯಲು ಕಾರಣವೇನು;

(ಉ) ೨೦೧೫–೧೬ನೇ ಸಾಲಿನ ಕ್ರಿಯಾ ಯೋಜನೆಯಲ್ಲಿ ಮಂಜೂರಾದ ಯೋಜನೇತರ ವೆಚ್ಚವೆಷ್ಟು ? (ವಿವರವಾದ ಮಾಹಿತಿಯನ್ನು ನೀಡುವುದು)

## ಕೃಷ್ಣ ಕೊಳದಲ್ಲಿನ ಒಟ್ಟು ನೀರಾವರಿ ಯೋಜನೆಗಳ ಕ್ಷೇತ್ರ ವ್ಯಾಪ್ತಿ ಬಗ್ಗೆ

**ಶ್ರೀ ಆಚಾರ್ ಹಾಲಪ್ಪ ಬಸಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫೧ (೩೬೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೃಷ್ಣಾ ಕೊಳದಲ್ಲಿನ ಒಟ್ಟು ನೀರಾವರಿ ಯೋಜನೆಗಳು ಯಾವುವು; ಅವುಗಳ ಒಟ್ಟು ಕ್ಷೇತ್ರ ವ್ಯಾಪ್ತಿ ಎಷ್ಟಿದೆ ;

(ಆ) ಈ ಯೋಜನೆಗಳ ಅನುಷ್ಠಾನಕ್ಕಾಗಿ ಸರ್ಕಾರ ಇದುವರೆಗೂ

ಖರ್ಚು ಮಾಡಿದ ಅನುದಾನ ಎಷ್ಟು ; (ಯೋಜನೆಗಳವಾರು ವಿವರ ನೀಡುವುದು)

(ಇ) ಈ ಯೋಜನೆಗಳ ಶಂಖು ಸ್ಥಾಪನೆ ಮಾಡಿದ ದಿನಾಂಕ ಯಾವುದು; ಮತ್ತು ಸದರಿ ಯೋಜನೆಗಳ ಪ್ರಗತಿ ಯಾವ ಹಂತದಲ್ಲಿವೆ ;

(ಈ) ಕಳೆದ ೨ ವರ್ಷಗಳಲ್ಲಿ ಈ ಯೋಜನೆಗಳಿಗೆ ನೀಡಲಾದ ಅನುದಾನ ಎಷ್ಟು ; ಯೋಜನೆಗಳ ಲೋಕಾರ್ಪಣೆಗೆ ಇನ್ನೂ ಬೇಕಾಗಿರುವ ಅನುದಾನದ ಪ್ರಮಾಣ ಎಷ್ಟು ; (ಪ್ರತ್ಯೇಕ ವಿವರಗಳನ್ನು ನೀಡುವುದು)

(ಉ) ಸದರಿ ಯೋಜನೆಗಳನ್ನು ಪೂರ್ಣಗೊಳಿಸಿ ಲೋಕಾರ್ಪಣೆ ಮಾಡಲು ಎಷ್ಟು ಸಮಯದ ಅಗತ್ಯತೆ ಇದೆ ?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ "ಕೆರೆಗೆ ನೀರು ತುಂಬುವ ಯೋಜನೆ" ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ):–**

೨೫೨ (೩೬೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಲೋಕಾರ್ಪಣೆಗೊಂಡ "ಕೆರೆಗೆ ನೀರು ತುಂಬುವ ಯೋಜನೆ" ಅಡಿಯ ಕೆರೆಗಳು ಯಾವುವು ;

(ಆ) ಕಾಮಗಾರಿ ನಡೆಯುತ್ತಿರುವ ಕೆರೆಗಳು ಯಾವುವು ;

(ಇ) ಪ್ರಸ್ತಾವಿತ ಕೆರೆಗಳು ಯಾವುವು ;

(ಈ) ಮೇಲಿನ ಪ್ರತಿಯೊಂದರ ನೀರಿನ ಸಂಗ್ರಹಣಾ ಸಾಮರ್ಥ್ಯ ಎಷ್ಟು;

(ಉ) ಲೋಕಾರ್ಪಣೆಗೊಂಡ ಕೆರೆಗಳಲ್ಲಿ ಇಲ್ಲಿಯವರೆಗೂ



ಸಂಗ್ರಹಣೆಗೊಂಡ ಗರಿಷ್ಠ ನೀರಿನ ಪ್ರಮಾಣ ಎಷ್ಟು ; ಅವುಗಳ ಸಾಮರ್ಥ್ಯ ಎಷ್ಟು ? (ಪ್ರತಿಯೊಂದರ ವಿವರ ನೀಡುವುದು)

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿನ ಬ್ರಿಡ್ಜ್ ಕಂ ಬ್ಯಾರೇಜ್‌ಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ):–**

೨೫೩ (೩೬೭) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಬ್ರಿಡ್ಜ್ ಕಂ ಬ್ಯಾರೇಜ್‌ಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಪ್ರತಿಯೊಂದರ ನೀರು ಸಂಗ್ರಹಣಾ ಸಾಮರ್ಥ್ಯ ಎಷ್ಟು;

(ಇ) ಕಳೆದ ೦೨ ವರ್ಷಗಳಲ್ಲಿ ಈ ಬ್ಯಾರೇಜ್‌ಗಳಲ್ಲಿ ನಿಲ್ಲಿಸಿರುವ ಗರಿಷ್ಠ ನೀರಿನ ಪ್ರಮಾಣ ಎಷ್ಟು ; ಅವುಗಳ ಸಾಮರ್ಥ್ಯ ಎಷ್ಟು ;

(ಈ) ಈ ಪ್ರತಿ ಬ್ಯಾರೇಜ್‌ಗಳ ನಿರ್ವಹಣೆಗೆ ಇರುವ ಸಿಬ್ಬಂದಿ ವ್ಯವಸ್ಥೆಗಳು ಎಷ್ಟು ? (ವಿವರ ನೀಡುವುದು)

## ಅನುದಾನಿತ ಐ.ಟಿ.ಐ. ಶಿಕ್ಷಕರಿಗೆ ಒದಗಿಸಿರುವ ಸೌಲಭ್ಯಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ):–**

೨೫೪ (೩೭೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅನುದಾನಿತ ಐ.ಟಿ.ಐ. ಶಿಕ್ಷಕರಿಗೆ ಒದಗಿಸಿರುವ ಸೇವಾ ಸೌಲಭ್ಯಗಳು ಯಾವುವು; ನಿವೃತ್ತಿ ಸೌಲಭ್ಯಗಳು ಯಾವುವು ;

(ಆ) ಸರ್ಕಾರಿ ಐ.ಟಿ.ಐ. ಶಿಕ್ಷಕರಿಗೆ ಇರುವ ಸೌಲಭ್ಯಗಳು ಹಾಗೂ ಅನುದಾನಿತ ಐ.ಟಿ.ಐ. ಶಿಕ್ಷಕರಿಗೆ ಇರುವ ಸೇವಾ ಹಾಗೂ ನಿವೃತ್ತಿ ಸೌಲಭ್ಯಗಳ ತುಲನಾತ್ಮಕ ವಿವರ ನೀಡುವುದು?

## ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ (ಎಸ್‌ಸಿವಿಟಿ ಮತ್ತು ಎಂಸಿವಿಟಿ) ಐ.ಟಿ.ಐ. ಕಾಲೇಜುಗಳ ಕುರಿತು

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ ):–**

೨೫೫ (೩೭೦) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಜಯಪುರ, ಬಾಗಲಕೋಟೆ ಮತ್ತು ಬೆಳಗಾವಿ ಜಿಲ್ಲೆಗಳಲ್ಲಿ ಇರುವ ಎಸ್‌ಸಿವಿಟಿ, ಎಂಸಿವಿಟಿ ಮತ್ತು ಐ.ಟಿ.ಐ. ಕಾಲೇಜುಗಳು ಎಷ್ಟು; (ಹೆಸರು ವಿಳಾಸ ನೀಡುವುದು)

(ಆ) ಇವುಗಳಲ್ಲಿ ಅನುದಾನಿತ/ಅನುದಾನ ರಹಿತ ಹಾಗೂ ಅನುದಾನಿತದಲ್ಲಿ ಇರುವ ಅನುದಾನ ರಹಿತ Tride ಎಷ್ಟು; ಯಾವುವು ; (ವಿವರ ನೀಡುವುದು)

(ಇ) ಪ್ರತಿ ವಿಭಾಗದಲ್ಲಿ ಓದುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಈ) ಎಸ್‌ಸಿವಿಟಿ ಹಾಗೂ ಎಂಸಿವಿಟಿ ಅನುಸರಿಸುತ್ತಿರುವ ಶೈಕ್ಷಣಿಕ ಅಂಶಗಳು ಹಾಗೂ ಇರುವ ವ್ಯತ್ಯಾಸಗಳು ಏನು ? (ತುಲಾನಾತ್ಮಕ ವಿವರ ನೀಡುವುದು)



## ಕೆ.ಬಿ.ಜೆ.ಎನ್.ಎಲ್ ಗೆ ನೀಡಿರುವ ಅನುದಾನ, ವಿನಿಯೋಗಿಸಿದ ಅನುದಾನದ ಕುರಿತು.

**ಶ್ರೀ ಅರುಣ ಶಹಾಪುರ (ಶಿಕ್ಷಕರ ಕ್ಷೇತ್ರ):–**

೨೫೬ (೩೬೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಮತ್ತು ೨೦೧೪–೧೫ನೇ ಸಾಲಿನಲ್ಲಿ ಕೆ.ಬಿ.ಜೆ.ಎನ್.ಎಲ್ ಗೆ ಒದಗಿಸಿರುವ ಅನುದಾನ ಎಷ್ಟು ; ವಿನಿಯೋಗಿಸಿದ ಹಣ ಎಷ್ಟು ;

(ಆ) ಯಾವ ಯಾವ ಮೂಲದಿಂದ ಎಷ್ಟು ಹಣ ಒದಗಿಸಿಕೊಳ್ಳಲಾಗಿದೆ ; ಯಾವ ಯಾವ ಕಾರ್ಯಗಳಿಗೆ, ಕಾಮಗಾರಿಗಳಿಗೆ ಎಷ್ಟೆಷ್ಟು ಹಣ ವಿನಿಯೋಗಿಸಲಾಗಿದೆ ; (ವಿವರ ನೀಡುವುದು)

(ಇ) ನೂತನ ಭೂ ಸ್ವಾಧೀನದ ಕಾನೂನು ಏನು ; ಕಳೆದ ೦೨ ವರ್ಷಗಳಲ್ಲಿ ಎಷ್ಟು ಎಕರೆ ಭೂ ಸ್ವಾಧೀನ ಪ್ರಕ್ರಿಯೆಗೆ ಕ್ರಮ ಕೈಗೊಳ್ಳಲಾಗಿದೆ ?

## ಕೈಮಗ್ಗ ನೇಕಾರರ "ನೂಲು ಸಂಗ್ರಹಣಾ ಘಟಕ" ಬಗ್ಗೆ.

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ(ಅಣ್ಣಯ್ಯ) (ನಾಮ ನಿರ್ದೇಶನ) :–**

೨೫೭ (೩೭೫) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನ ಆಯವ್ಯಯದಲ್ಲಿ ಸರ್ಕಾರ ಕೈಮಗ್ಗ ನೇಕಾರರಿಗೆ ತೊಂದರೆ ಆಗದ ಹಾಗೆ ಕಚ್ಚಾ ಮಾಲು ಸರಬರಾಜು ಮಾಡಲು ಕೈಮಗ್ಗ ಅಭಿವೃದ್ಧಿ ನಿಗಮದಲ್ಲಿ ನೂಲು ಸಂಗ್ರಹಣ ಘಟಕ ಸ್ಥಾಪಿಸಲು ಘೋಷಿಸಲಾಗಿದೆಯೇ ;

(ಆ) ಹಾಗಿದ್ದಲ್ಲಿ, ಎಲ್ಲಿ ನೂಲು ಸಂಗ್ರಹಣ ಘಟಕ ಪ್ರಾರಂಭ ಮಾಡಲಾಗಿದೆ ; ನೇಕಾರರು ಹೆಚ್ಚು ಇರುವ ಜಿಲ್ಲೆಗಳಲ್ಲಿ ಆಯ್ಕೆ ಮಾಡಲಾಗಿದೆಯೇ ;

(ಇ) ಇಲ್ಲದಿದ್ದಲ್ಲಿ, ಯಾವಾಗ ಮಾಡಲಾಗುವುದು ; ಎಷ್ಟು ಹಣ ನಿಗದಿ ಮಾಡಲಾಗಿದೆ ?

## ಸಬ್ಸಿಡಿ ದರದಲ್ಲಿ ನೇಕಾರರಿಗೆ ಮಗ್ಗ ನೀಡುವ ಬಗ್ಗೆ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ(ಅಣ್ಣಯ್ಯ) (ನಾಮ ನಿರ್ದೇಶನ):–**

೨೫೮ (೩೭೩) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನಲ್ಲಿ ಸಬ್ಸಿಡಿ ದರದಲ್ಲಿ ವಿದ್ಯುತ್ ಮಗ್ಗ ನೇಕಾರರಿಗೆ ನೀಡಲಿರುವ ಮಗ್ಗಗಳ ಗುರಿ ಎಷ್ಟು ;

(ಆ) ಈ ಸಾಲಿನಲ್ಲಿ ಫಲಾನುಭವಿಗಳನ್ನು ಆಯ್ಕೆ ಮಾಡಲಾಗಿದೆಯೇ ; (ಆಯ್ಕೆ ಮಾಡಿದ್ದರೆ ಹೆಸರು ವಿಳಾಸ ಸಮೇತ ವಿವರ ನೀಡುವುದು)

(ಇ) ನಗರ ಪ್ರದೇಶಗಳಲ್ಲಿ ವಿದ್ಯುತ್ ಮಗ್ಗಗಳಿಗೆ ಹೊಸದಾಗಿ ಅನುಮತಿ ಕೊಡದಿರುವಾಗ ಯಾವ ಆಧಾರದ ಮೇಲೆ ಈ ಯೋಜನೆ ನೀಡಲಾಗುವುದು. ಇದರ ಬಗ್ಗೆ ತೆಗೆದುಕೊಂಡಿರುವ ಕ್ರಮಗಳೇನು ?



## ಮಹಿಳಾ ನೇಕಾರರಿಗೆ ವಸತಿ ಕಾರ್ಯಾಗಾರ ಕುರಿತು

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ(ಅಣ್ಣಯ್ಯ) (ನಾಮ ನಿರ್ದೇಶನ) :–**

೨೫೯ (೩೭೪) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೫–೧೬ನೇ ಸಾಲಿನ ಆಯವ್ಯಯದಲ್ಲಿ ಮಹಿಳಾ ನೇಕಾರರಿಗೆ ವಸತಿ ಕಾರ್ಯಗಾರಗಳನ್ನು ನಿರ್ಮಿಸಲು ಎಷ್ಟು ಮನೆ ಹಾಗೂ ಕಾರ್ಯಗಾರ ಮಂಜೂರು ಮಾಡಲಾಗಿದೆ ;

(ಆ) ಆಯ–ವ್ಯಯದಲ್ಲಿ ಈ ಯೋಜನೆಗೆ ನಿಗದಿಪಡಿಸಿರುವ ಹಣ ಎಷ್ಟು ;

(ಇ) ಈಗಾಗಲೇ ಈ ಯೋಜನೆಯಲ್ಲಿ ಯಾವ ಯಾವ ಜಿಲ್ಲೆ, ತಾಲ್ಲೂಕು ನಿಗದಿ ಮಾಡಲಾಗಿದೆ ಗುರಿ ಎಷ್ಟು ; (ವಿವರ ನೀಡುವುದು)

(ಈ) ಆಯ್ಕೆಯ ಮಾನದಂಡವೇನು ಈಗಾಗಲೇ ಆಯ್ಕೆಯಾಗಿದ್ದರೆ ಫಲಾನುಭವಿಗಳ (ಹೆಸರು ಸಹಿತ ವಿವರ ನೀಡುವುದು)?

## ನೇಕಾರರ ಸಾಲ ಮನ್ನಾ

**ಶ್ರೀ ಎಂ. ಡಿ. ಲಕ್ಷ್ಮೀನಾರಾಯಣ(ಅಣ್ಣಯ್ಯ) (ನಾಮ ನಿರ್ದೇಶನ) :–**

೨೬೦ (೩೭೨) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೇಕಾರರ ಸಾಲ ಮನ್ನಾ ಯೋಜನೆ ಯಾವಾಗ ಜಾರಿಗೆ ಬಂತು ;

(ಆ) ಮನ್ನಾ ಆಗಿರುವ ಮೊತ್ತವೆಷ್ಟು ;

(ಇ) ಯಾವ ಅವಧಿಯಿಂದ ಅಸಲು ಮತ್ತು ಬಡ್ಡಿ ಸಂಪೂರ್ಣ ಮನ್ನಾ ಆಗಿದೆ ;

(ಈ) ಇದುವರೆಗೂ ಅಸಲು ಮಾತ್ರ ಬಿಡುಗಡೆ ಆಗಿದ್ದು, ಬಡ್ಡಿ ಹಣ ಬಿಡುಗಡೆ ಆಗದಿರಲು ಕಾರಣವೇನು ;

(ಉ) ಹಲವಾರು ಬಾರಿ ಕಛೇರಿಗೆ ಬಡ ನೇಕಾರರು ಅಲೆದಾಡಿದ್ದರೂ ಕೆಲಸವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಹಾಗಿದ್ದಲ್ಲಿ, ಉಳಿದಿರುವ ಕಡತಗಳನ್ನು ಕೂಡಲೇ ವಿಲೇವಾರಿ ಮಾಡಲಾಗುವುದೆ ?

## ಅಕಾಲಿಕ ಮಳೆಯಿಂದ ರೈತರಿಗೆ ಆದ ಹಾನಿ.

**ಕ್ಯಾಪ್ಟನ್ ಗಣೇಶ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೬೧ (೩೮೭) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಕಾಲಿಕ ಮಳೆಯಿಂದ ರೈತರ ಫಸಲಿಗೆ ಹಾನಿಯಾಗಿದ್ದು, ರೈತರು ಆತಂಕಕ್ಕೀಡಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ರಾಜ್ಯದಲ್ಲಿ ಬೆಳೆ ಹಾನಿಯಿಂದಾದ ನಷ್ಟದ ಮೊತ್ತವೆಷ್ಟು ;

(ಇ) ಈವರೆಗೆ ಬೆಳೆ ಹಾನಿಯಿಂದ ತೊಂದರೆಗೊಳಗಾದ ರೈತರಿಗೆ ಪರಿಹಾರದ ಮೊತ್ತವೆಷ್ಟು ;

(ಈ) ರಾಜ್ಯಾದ್ಯಂತ ಮೇ ಮತ್ತು ಜೂನ್ ತಿಂಗಳಲ್ಲಿ ಸಿಡಿಲು ಬಡಿತದಿಂದ ಸಾವನ್ನಪ್ಪಿದ ಜನಸಂಖ್ಯೆ ಎಷ್ಟು ;

(ಉ) ಇದರಲ್ಲಿ ಎಷ್ಟು ಜನರಿಗೆ ಪರಿಹಾರದ ಮೊತ್ತವನ್ನು ಕೊಡಲಾಗಿದೆ ?



## ಅರಣ್ಯದಲ್ಲಿ ಪ್ರಾಣಿ–ಪಕ್ಷಿಗಳಿಗೆ ಉಪಯೋಗವಾಗುವ ಹಣ್ಣು ಹಂಪಲುಗಳ ಹಾಗೂ ಆಹಾರ ಒದಗಿಸುವ ಮರ ಗಿಡಗಳ ಬಗ್ಗೆ.

**ಕ್ಯಾಪ್ಟನ್ ಗಣೇಶ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೬೨ (೩೮೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅರಣ್ಯದಲ್ಲಿ ಪ್ರಾಣಿ–ಪಕ್ಷಿಗಳಿಗೆ ಉಪಯೋಗವಾಗುವ ಹಣ್ಣು ಹಂಪಲುಗಳ ಹಾಗೂ ಆಹಾರ ಒದಗಿಸುವ ಮರ ಗಿಡಗಳು ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇದರಿಂದ ಅರಣ್ಯ ಪರಿಸರದಲ್ಲಿ ಅಸಮತೋಲನ ಉಂಟಾಗಿರುವುದು ಸರ್ಕಾರ ಗಮನಿಸಿದೆಯೇ ;

(ಇ) ಈ ರೀತಿ ಉಂಟಾದ ಪ್ರಾಕೃತಿಕ ಅಸಮತೋಲನವನ್ನು ನಿವಾರಿಸಲು ಸರ್ಕಾರ ಏನು ಕ್ರಮ ಕೈಗೊಂಡಿದೆ ?

## ಬಾಲ ಕಾರ್ಮಿಕರ ರಕ್ಷಣೆ ಮತ್ತು ಪುನರ್ವಸತಿ.

**ಕ್ಯಾಪ್ಟನ್ ಗಣೇಶ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೬೩ (೩೭೭) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಬಾಲಕಾರ್ಮಿಕರ ಸಂಖ್ಯೆ ಎಷ್ಟು;

(ಆ) ಬಾಲಕಾರ್ಮಿಕರ ರಕ್ಷಣೆ ಮತ್ತು ಪುನರ್ವಸತಿ ಪ್ರಕ್ರಿಯೆ ವಿವರಿಸಿ;

(ಇ) ಪುನರ್ವಸತಿ ಹೊಂದಿದ ಬಾಲಕಾರ್ಮಿಕರ ಸಂಖ್ಯೆ ಎಷ್ಟು; (ಮೂರು ವರ್ಷಗಳ ವಿವರ ನೀಡುವುದು)

(ಈ) ಬಾಲಕಾರ್ಮಿಕರ ಸಂಪೂರ್ಣ ನಿಷೇಧ ಮತ್ತು ನಿಯಂತ್ರಣಕ್ಕೆ ಸರ್ಕಾರದ ನಿಲುವೇನು;

(ಉ) ರಾಜ್ಯವನ್ನು ಬಾಲಕಾರ್ಮಿಕ ಮುಕ್ತವನ್ನಾಗಿಸಲು ಸರ್ಕಾರ ರೂಪಿಸಿರುವ ಕ್ರಿಯಾ ಯೋಜನೆಗಳಾವುವು? (ವಿವರ ನೀಡುವುದು)

## ರಾಜ್ಯದಲ್ಲಿ ಬಿ.ಪಿ.ಎಲ್ ಕುಟುಂಬಗಳಿಗೆ ವಸ್ತ್ರ ಭಾಗ್ಯ ಯೋಜನೆ ಕುರಿತು.

**ಕ್ಯಾಪ್ಟನ್ ಗಣೇಶ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೬೪ (೩೭೮) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಿ.ಪಿ.ಎಲ್. ಕುಟುಂಬಗಳಿಗೆ ವಸ್ತ್ರ ಭಾಗ್ಯ ಯೋಜನೆಯನ್ನು ತರುವ ಯೋಚನೆ ಸರ್ಕಾರಕ್ಕೆ ಇದೆಯೇ; ಇದ್ದಲ್ಲಿ ಇದರ ರೂಪುರೇಷೆಗಳೇನು ; (ವಿವರ ನೀಡುವುದು)

(ಆ) ಈ ಯೋಜನೆಯನ್ನು ಯಾವಾಗಿನಿಂದ ಜಾರಿಗೆ ತರಲಾಗುವುದು;

(ಇ) ಪ್ರಸಕ್ತ ಈ ಯೋಜನೆಗೆ ಆಯವ್ಯಯ ಸಾಲಿನಲ್ಲಿ ಎಷ್ಟು ಹಣವನ್ನು ಖರ್ಚು ಮಾಡಲಾಗುವುದು ?

## ಕರಾವಳಿ ಕರ್ನಾಟಕದ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಕುಡಿಯುವ ನೀರಿನ ಸಮಸ್ಯೆ ಬಗ್ಗೆ.

**ಕ್ಯಾಪ್ಟನ್ ಗಣೇಶ ಕಾರ್ಣಿಕ್ (ಶಿಕ್ಷಕರ ಕ್ಷೇತ್ರ):–**

೨೬೫ (೪೪೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಕುಡಿಯುವ ನೀರಿನ ಸಮಸ್ಯೆ ಮತ್ತು ಕುಸಿಯುತ್ತಿರುವ ಅಂತರ್ಜಲ ಹಾಗೂ ಸಮುದ್ರ ಸೇರುವ ನದಿಗಳಲ್ಲಿ ಹಿಮ್ಮುಖವಾಗಿ ಚಲಿಸುತ್ತಿರುವ ಉಪ್ಪು ನೀರಿನ ಸಮಸ್ಯೆಯ ಪರಿಹಾರಕ್ಕಾಗಿ ಸರ್ಕಾರ ಏನು ಕ್ರಮ ಕೈಗೊಂಡಿದೆ;



(ಆ) ಬಹುದಿನಗಳಿಂದ ನೆನಗುದಿಗೆ ಬಿದ್ದಿರುವ ಪಶ್ಚಿಮ ವಾಹಿನಿ ಯೋಜನೆಯನ್ನು ಯಾವಾಗ ಕಾರ್ಯರೂಪಕ್ಕೆ ತರಲಾಗುವುದು ;

(ಇ) ಈ ಯೋಜನೆಗೆ ವಿವರವಾದ ಮಾಹಿತಿ ಹಾಗೂ ಮೀಸಲಿಟ್ಟಿರುವ ಅಂದಾಜು ಮೊತ್ತವೆಷ್ಟು; (ವಿವರ ನೀಡುವುದು) ?

## ಖಾಸಗಿ ಅನುದಾನಿತ ಐಟಿಐ ನೌಕರರಿಗೆ ಸವಲತ್ತು ಒದಗಿಸುವ ಬಗ್ಗೆ.

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೨೬೬ (೩೭೯) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪಿ.ಇ.ಎಸ್.ಎಸ್. ಥಾಮಸ್‌ರವರ ವರದಿ ಆಧರಿಸಿ, ಖಾಸಗಿ ಅನುದಾನಿತ ಐ.ಟಿ.ಐ. ನೌಕರರಿಗೆ ಗ್ರಾಚ್ಯುಟಿ, ವಾರ್ಷಿಕ ವೇತನ ಬಡ್ತಿ, ನಿವೃತ್ತಿ ಪಿಂಚಣಿ, ರಜೆ ಇತರೆ ಸವಲತ್ತುಗಳನ್ನು ಒದಗಿಸಲು ಆದೇಶ ನೀಡಲಾಗಿದೆಯೇ;

(ಆ) ಹಾಗಾದರೆ, ಎಂದು ಆದೇಶ ಮಾಡಲಾಗಿದೆ; ಆದೇಶದಲ್ಲಿನ ಮುಖ್ಯಾಂಶಗಳೇನು; (ವಿವರ ನೀಡುವುದು)

(ಇ) ಸದರಿ ಆದೇಶವನ್ನು ಇದುವರೆವಿಗೂ ಜಾರಿಗೊಳಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದಕ್ಕೆ ಕಾರಣಗಳೇನು;

(ಈ) ಯಾವ ಕಾಲಮಿತಿಯಲ್ಲಿ ಸದರಿ ಸವಲತ್ತುಗಳನ್ನು ಜಾರಿಗೊಳಿಸಲಾಗುವುದು ?

## ರಾಜ್ಯದ ತಾಲ್ಲೂಕು ಕೇಂದ್ರಗಳ ಕ್ರೀಡಾಂಗಣಗಳ ಮಾಹಿತಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೨೬೭ (೩೮೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎಷ್ಟು ತಾಲ್ಲೂಕು ಕೇಂದ್ರಗಳಲ್ಲಿ ಕ್ರೀಡಾಂಗಣ ಇರುವುದಿಲ್ಲ; (ವಿವರ ನೀಡುವುದು);

(ಆ) ಸದರಿ ತಾಲ್ಲೂಕುಗಳಲ್ಲಿ ಕ್ರೀಡಾಂಗಣ ನಿರ್ಮಿಸಲು ಯೋಜನೆ ರೂಪಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ ಯೋಜನೆಯ ಅಂದಾಜು ಮೊತ್ತವೆಷ್ಟು;

(ಈ) ಯಾವ ಕಾಲಮಿತಿಯಲ್ಲಿ ಕ್ರೀಡಾಂಗಣ ನಿರ್ಮಿಸಲಾಗುವುದು ?

## ಸಣ್ಣ ನೀರಾವರಿ ಕೆರೆಗಳ ದುರಸ್ಥಿ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೨೬೮ (೩೮೧) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖಾ ವ್ಯಾಪ್ತಿಯ ಕೆರೆಗಳ ಸಂಖ್ಯೆ ಎಷ್ಟು;

(ಆ) ಸದರಿ ಕೆರೆಗಳನ್ನು ದುರಸ್ಥಿಗೊಳಿಸಲು ಯೋಜನೆ ರೂಪಿಸಲಾಗಿದೆಯೇ;

(ಇ) ಹಾಗಿದ್ದಲ್ಲಿ , ಯೋಜನೆಯ ರೂಪುರೇಷೆಗಳೇನು; ಯೋಜನೆಯ ಅಂದಾಜು ಮೊತ್ತವೆಷ್ಟು;

(ಈ) ಕಾಮಗಾರಿ ಯಾವ ಹಂತದಲ್ಲಿದೆ;

(ಉ) ಯಾವ ಕಾಲಮಿತಿಯಲ್ಲಿ ಯೋಜನೆ ಪೂರ್ಣಗೊಳಿಸಲಾಗುವುದು ?



## ಮಂಡ್ಯ ಜಿಲ್ಲೆ ಮದ್ದೂರು ತಾಲ್ಲೂಕಿನ ಕೆಲವು ಗ್ರಾಮಗಳ ಕಂದಾಯ ದಾಖಲೆ ವರ್ಗಾಯಿಸುವ ಬಗ್ಗೆ

**ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ):–**

೨೬೯ (೪೧೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ, ಮದ್ದೂರು ತಾಲ್ಲೂಕಿನ ಹರಳೇಕೆರೆ. ಚನ್ನಮ್ಮನ ಕೊಪ್ಪಲು, ಮೂಡ್ಯ, ಅವ್ವೇರಹಳ್ಳಿ, ಆಬಲವಾಡಿ. ತರಿಕೆರೆ, ತರೀಕೆರೆ ಕಾಲೋನಿ, ಸೋಮನಹಳ್ಳಿ ಈ ಗ್ರಾಮಗಳ ಕಂದಾಯ ದಾಖಲೆಗಳನ್ನು ಸಾರ್ವಜನಿಕ ಹಿತದೃಷ್ಟಿಯಿಂದ ಕೊಪ್ಪ ನಾಡ ಕಛೇರಿಗೆ ವರ್ಗಾಯಿಸುವ ಸಂಬಂಧ ಪ್ರಸ್ತಾವನೆಯು ಸರ್ಕಾರದ ಹಂತದಲ್ಲಿದೆಯೇ;

(ಆ) ಹಾಗಿದ್ದರೆ, ಈ ಸಂಬಂಧ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು;

(ಇ) ಯಾವ ಕಾಲ ಮಿತಿಯಲ್ಲಿ ಸದರಿ ಗ್ರಾಮಗಳು ಕಂದಾಯ ದಾಖಲೆಗಳನ್ನು ಕೊಪ್ಪ ನಾಡ ಕಛೇರಿಗೆ ವರ್ಗಾಯಿಸಲಾಗುವುದು ?

## ಅಂತರ್ ಜಲ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳು.

**ಶ್ರೀಮತಿ ಜಯಮ್ಮ (ವಿಧಾನ ಸಭೆಯಿಂದ ಚುನಾಯಿತರಾದವರು):–**

೨೭೦ (೩೮೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಚಿತ್ರದುರ್ಗ ಜಿಲ್ಲೆ, ಮೊಳಕಾಲ್ಮೂರು ವಿಧಾನಸಭಾ ಕ್ಷೇತ್ರದ ನಾಯಕನಹಟ್ಟಿ–ತಳಕು ಹೋಬಳಿಗಳಲ್ಲಿ ಅಂತರ್ ಜಲ ಸಂಪೂರ್ಣ ಕುಸಿದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸರ್ಕಾರ ಈವರೆಗೆ ಕೈಗೊಂಡಕ್ರಮಗಳೇನು ;

(ಇ) ಅಂತರ್ ಜಲ ಹೆಚ್ಚಿಸಲು ರೂಪಿಸಿರುವ ಯೋಜನೆಗಳಾವುವು ; (ಯೋಜನಾವಾರು ವಿವರ ನೀಡುವುದು)

(ಈ) ಯೋಜನೆ ರೂಪಿಸಿದ್ದಲ್ಲಿ, ೨೦೧೫–೧೬ನೇ ಸಾಲಿನಲ್ಲಿ ಅನುದಾನ ಕಾಯ್ದಿರಿಸಲಾಗಿದೆಯೇ ?

## ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳು

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೧ (೩೮೫) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಸಣ್ಣ ನೀರಾವರಿ ವತಿಯಿಂದ ಕೊಪ್ಪಳ ಹಾಗೂ ರಾಯಚೂರು ಜಿಲ್ಲೆಗಳಲ್ಲಿ ಕಳೆದ ೨ ವರ್ಷಗಳಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಅವು ಯಾವುವು ; (ತಾಲ್ಲೂಕು ಮತ್ತು ಜಿಲ್ಲಾವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳಿಗೆ ಖರ್ಚಾಗಿರುವ ಹಣವೆಷ್ಟು ;

(ಇ) ರಾಯಚೂರು, ಮಾನ್ವಿ ಹಾಗೂ ದೇವದುರ್ಗ ತಾಲ್ಲೂಕುಗಳಲ್ಲಿ ಕೈಗೆತ್ತಿಕೊಂಡಿರುವ ಏತ ನೀರಾವರಿ (LI) ಯೋಜನೆಗಳು ಯಾವ ಹಂತದಲ್ಲಿವೆ ;

(ಈ) ರಾಯಚೂರು ಜಿಲ್ಲೆ ಮಾನ್ವಿ ತಾಲ್ಲೂಕಿನ ದದ್ದಲ ಏತನೀರಾವರಿ ಹಾಗೂ ಮಾದಲಾಪೂರ (Modalapur) ಏತ ನೀರಾವರಿ ಯೋಜನೆಗಳು ನಿರ್ಮಾಣದ ಕಾರ್ಯ ಯಾವ ಹಂತದಲ್ಲಿದೆ ;



(ಉ) ನಿರ್ಮಾಣ ಹಂತದಲ್ಲಿರುವ ಏತ ನೀರಾವರಿ ಯೋಜನೆಗಳನ್ನು ತ್ವರೀತ ಗತಿಯಲ್ಲಿ ಪೂರೈಸಲು ಸರಕಾರ ತೆಗೆದುಕೊಂಡಿರುವ ಕ್ರಮವೇನು ?

## ಲಂಬಾಣಿ ತಾಂಡಗಳನ್ನು ಗ್ರಾಮಗಳನ್ನಾಗಿ ಪರಿವರ್ತಿಸುವ ಬಗ್ಗೆ.

**ಶ್ರೀ ಎನ್. ಎಸ್. ಬೋಸ್‌ರಾಜು (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೨ (೩೮೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಯಚೂರು ಜಿಲ್ಲೆಯಲ್ಲಿ ಲಂಬಾಣಿ ತಾಂಡಗಳು ಹಾಗೂ ಗೊಲ್ಲರಹಟ್ಟಿ ಹಾಗೂ ಸೇಟ್‌ಲೇಸ್ ಕ್ಯಾಂಪ್‌ಗಳು ಇರುವ ತಾಂಡಗಳು ಮತ್ತು ಕ್ಯಾಂಪ್‌ಗಳ ಸಂಖ್ಯೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಇವುಗಳನ್ನು ಗ್ರಾಮಗಳಾಗಿ ಪರಿವರ್ತಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

## ಕಾವೇರಿ ಕುಡಿಯುವ ನೀರು ಕಲುಷಿತವಾಗುತ್ತಿರುವ ಬಗ್ಗೆ.

**ಶ್ರೀ ಇ. ಕೃಷ್ಣಪ್ಪ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೮೩ (೩೮೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಮನಗರ–ಚನ್ನಪಟ್ಟಣ ನಗರಗಳಿಗೆ ಪ್ರತಿದಿನ ಕುಡಿಯುವ ನೀರಿಗಾಗಿ ಪೂರೈಕೆಯಾಗುತ್ತಿರುವ ಕಾವೇರಿ ಕುಡಿಯುವ ನೀರಿನ ಪ್ರಮಾಣವೆಷ್ಟು ;

(ಆ) ಕಾವೇರಿ ಕುಡಿಯುವ ನೀರು ಕಲುಷಿತವಾಗಿದೆಯೇ ಸರಬರಾಜಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಈ ನಗರಗಳಿಗೆ ಶುದ್ಧ ಕುಡಿಯುವ ನೀರನ್ನು ಸರಬರಾಜು ಮಾಡಲು ಸರ್ಕಾರ ಯಾವ ರೀತಿಯ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಂಡಿದೆ ;

(ಈ) ನಗರದ ಕೆಲವು ಭಾಗಗಳಿಗೆ ಸಮರ್ಪಕ ಕುಡಿಯುವ ನೀರು ಸರಬರಾಜಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಸರ್ಕಾರದ ಕ್ರಮಗಳೇನು ?

## ಕಂದಾಯ ಜಮೀನುಗಳ ನೋಂದಣಿ ಮೊತ್ತ ಹೆಚ್ಚಾಗಿರುವ ಕುರಿತು.

**ಶ್ರೀ ಮೃತುಂಜಯ ಜಿನಗಾ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು):–**

೨೭೪ (೩೯೪) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಕಂದಾಯ ಜಮೀನುಗಳ ನೋಂದಣಿ ಮೊತ್ತ ಹೆಚ್ಚಾಗಿದ್ದು, ೭೯–ಎ ಮತ್ತು ೭೯–ಎ ರ ಉಲ್ಲಂಘನೆ ಆಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಜಿಲ್ಲೆಯ ೭೯–ಎ–ಬಿ ರ ಅಡಿಯಲ್ಲಿ ದಾಖಲಾದ ಪ್ರಕರಣಗಳೆಷ್ಟು ಇದರಲ್ಲಿ ಎಷ್ಟು ಕಡತಗಳು ಬಾಕಿ ಇವೆ ;



(ಇ) ಬಾಕಿ ಇರುವ ಕಡತಗಳು ಯಾವಾಗ ಮುಕ್ತಾಯಗೊಳಿಸಲಾಗುತ್ತದೆ ;

(ಈ) ಕಂದಾಯ ಜಮೀನುಗಳ ಮೊತ್ತ ಹೆಚ್ಚಾಗಿರುವುದರಿಂದ; ಕಂದಾಯ ನಿರೀಕ್ಷಕರು ರೈತರಿಂದ ಹಣ ವಸೂಲಿ ಮಾಡುತ್ತಿದ್ದು ಇದರಿಂದ ರೈತರಿಗೆ ಆಗುತ್ತಿರುವ ತೊಂದರೆ ತಪ್ಪಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ಕ್ರೀಡಾ ಇಲಾಖೆಯ ವಸತಿ ಶಾಲೆಯ ಬಗ್ಗೆ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೭೫ (೩೯೬) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕ್ರೀಡಾ ಇಲಾಖೆಯ ವಸತಿ ಶಾಲೆಗಳ ವಿದ್ಯಾರ್ಥಿಗಳಿಗೆ ಹಾಗೂ ಕ್ರೀಡಾಪಟುಗಳಿಗೆ ಸರಿಯಾದ ರೀತಿಯ ತರಬೇತಿ ಹಾಗೂ ಊಟದ ವ್ಯವಸ್ಥೆ ಇಲ್ಲದೆ ಇರುವುದು ಸರಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ನಿಟ್ಟಿನಲ್ಲಿ ತರಬೇತಿ ಹಾಗೂ ಊಟದ ವ್ಯವಸ್ಥೆಗಾಗಿ ಸರಕಾರವು ತೆಗೆದುಕೊಳ್ಳುವ ಕ್ರಮವೇನು ; (ಮಾಹಿತಿ ನೀಡುವುದು)

(ಇ) ೨೦೧೫–೧೬ನೇ ಸಾಲಿನಲ್ಲಿ ಹೊಸದಾಗಿ ಕ್ರೀಡಾ ವಸತಿ ಶಾಲೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ಇದ್ದಲ್ಲಿ ಪ್ರಸಕ್ತ ಸಾಲಿಗೆ ಮಂಜೂರು ಮಾಡಿರುವ ಕ್ರೀಡಾ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

(ಈ) ಅವುಗಳ ನಿರ್ಮಾಣಕ್ಕಾಗಿ ಮಂಜೂರು ಮಾಡಿರುವ ಮೊತ್ತವೆಷ್ಟು ? (ಜಿಲ್ಲಾವಾರು ತಾಲ್ಲುಕುವಾರು ಮಾಹಿತಿ ನೀಡುವುದು)

## ಹೈ. ಕ. ಭಾಗದ ಜಲಾಶಯಗಳ ಪುನಶ್ಚೇತನಕ್ಕೆ ಹೆಚ್ಚುವರಿ ಅನುದಾನ.

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೭೬ (೪೧೬) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಹೈ.ಕ ಭಾಗದ ಜಿಲ್ಲೆಗಳ ಅಭಿವೃದ್ಧಿಯ ದೃಷ್ಟಿಯಿಂದ ಜಲಾಶಯ ಪುನಶ್ಚೇತನಕ್ಕೆ ಹೆಚ್ಚುವರಿಯಾಗಿ ಅನುದಾನವನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

ಆ) ಇದ್ದರೆ, ಹೈ.ಕ. ಭಾಗದ ಜಿಲ್ಲೆಯಲ್ಲಿರುವ ಜಲಾಶಯಗಳ ಪುನಶ್ಚೇತನಕ್ಕಾಗಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರದಿಂದ ಹೆಚ್ಚುವರಿಯಾಗಿ ಎಷ್ಟು ಮೊತ್ತದ ಅನುದಾನ ಬಿಡುಗಡೆ ಮಾಡಲಾಗಿದೆ ;

ಇ) ಈ ಭಾಗದ ಬರಪೀಡಿತ ಪ್ರದೇಶಗಳಲ್ಲಿ ಹೊಸ ಜಲಾಶಯ ಹಾಗೂ ಬೃಹತ್ ನೀರಾವರಿ ಯೋಜನೆಗಳನ್ನು ಅನುಷ್ಠಾನಕ್ಕೆ ತರಲು ರಾಜ್ಯ ಹಾಗೂ ಕೇಂದ್ರ ಸರ್ಕಾರ ರೂಪಿಸಿರುವ ಯೋಜನೆಗಳಾವುವು ;

ಈ) ಸದರಿ ಯೋಜನೆಗಳಿಗೆ ೨೦೧೫–೧೬ ನೇ ಸಾಲಿನಲ್ಲಿ ಎಷ್ಟು ಮೊತ್ತವನ್ನು ಮಂಜೂರು ಮಾಡಲಾಗಿದೆ ? (ವಿವರವಾಗಿ ಮಾಹಿತಿ ಒದಗಿಸುವುದು)



## ಕುಶಲಕರ್ಮಿಗಳ ತರಬೇತಿ ಕೇಂದ್ರ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೭೭ (೩೯೭) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಕರಕುಶಲ ಅಭಿವೃದ್ಧಿ ನಿಗಮ ನಿಯಮಿತ ವತಿಯಿಂದ ಕಳೆದ ಎಷ್ಟು ವರ್ಷಗಳಿಂದ ಕುಶಲಕರ್ಮಿಗಳಿಗೆ ತರಬೇತಿ ನೀಡಲಾಗುತ್ತಿದೆ; ಹಾಗೂ ಯಾವ ಜಿಲ್ಲೆಗಳಲ್ಲಿ ತರಬೇತಿ ಶಾಲೆಗಳಿವೆ ; (ವರ್ಷವಾರು, ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಹೈದ್ರಾಬಾದ್–ಕರ್ನಾಟಕ ಭಾಗದ ಜಿಲ್ಲೆಗಳ ಅಭಿವೃದ್ಧಿಯ ಹಿತದೃಷ್ಟಿಯಿಂದ ಈಗಿರುವ ಕುಶಲಕರ್ಮಿಗಳ ತರಬೇತಿ ಕೇಂದ್ರಗಳನ್ನು ಹೊರತುಪಡಿಸಿ ಹೆಚ್ಚುವರಿಯಾಗಿ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಎಷ್ಟು ತರಬೇತಿ ಕೇಂದ್ರಗಳನ್ನು ಮಂಜೂರು ಮಾಡಲಾಗುವುದು ;

(ಇ) ತರಬೇತಿಗಾಗಿ ಸರಕಾರದಿಂದ ಬಿಡುಗಡೆಯಾದ ಹಾಗೂ ಖರ್ಚಾದ ಅನುದಾನ ಎಷ್ಟು; ಈ ತರಬೇತಿಯಲ್ಲಿ ಭಾಗವಹಿಸಿದ ಅಭ್ಯರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಈ) ಈ ತರಬೇತಿಯಿಂದ ಪ್ರಯೋಜನ ಪಡೆದುಕೊಂಡ ಫಲಾನುಭವಿಗಳ ಸಂಖ್ಯೆ ಎಷ್ಟು ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಹೈದರಾಬಾದ್ ಕರ್ನಾಟಕ ಭಾಗದ ಅಭ್ಯರ್ಥಿಗಳಿಗೆ "ಅರ್ಹತಾ ಪ್ರಮಾಣ ಪತ್ರ" ಬಗ್ಗೆ

**ಶ್ರೀ ಅಮರನಾಥ ಪಾಟೀಲ್ (ಪದವೀಧರರ ಕ್ಷೇತ್ರ):–**

೨೭೮ (೪೧೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹೈದರಾಬಾದ್–ಕರ್ನಾಟಕ ಪ್ರದೇಶದ ಅಭ್ಯರ್ಥಿಗಳಿಗಾಗಿ ಉದ್ಯೋಗ ಮತ್ತು ಶಿಕ್ಷಣಕ್ಕಾಗಿ ಮೀಸಲಾತಿ ಪಡೆಯಲು "ಅರ್ಹತಾ ಪ್ರಮಾಣ ಪತ್ರ" ಗಳನ್ನು ನೀಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಉದ್ಯೋಗ ಮತ್ತು ಶಿಕ್ಷಣಕ್ಕಾಗಿ ೨೦೧೪–೧೫ ಹಾಗೂ ೨೦೧೫–೧೬ನೇ ಸಾಲಿನಲ್ಲಿ ಸ್ವೀಕೃತವಾದ, ವಿತರಣೆಯಾದ ಮತ್ತು ತಿರಸ್ಕೃತವಾದ ಅರ್ಜಿಗಳ ಸಂಖ್ಯೆಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ವಿತರಣೆಯಾದ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಿದ ಎಷ್ಟು ದಿನಗಳೊಳಗಾಗಿ ನೀಡಲಾಗಿದೆ; (ನಿಖರವಾದ ಮಾಹಿತಿ ನೀಡುವುದು)

(ಇ) ಸ್ವೀಕೃತಗೊಂಡ ಅರ್ಜಿಗಳು ತಿರಸ್ಕೃತಗೊಂಡಿರಲು ಕಾರಣವೇನು;

(ಈ) ಅರ್ಜಿದಾರರು ರೂ. ೨೦೦೦ ರಿಂದ ೫೦೦೦ವರೆಗೆ ಏಜೆಂಟರ ಮುಖಾಂತರ ನೀಡಿದರೆ ತ್ವರಿತವಾಗಿ ಪ್ರಮಾಣಪತ್ರ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದರೆ, ಈ ಭಾಗದ ಪದವೀಧರರಿಗೆ ಹಾಗೂ ಜನಸಾಮಾನ್ಯರಿಗೆ



ಯಾವುದೇ ತೊಂದರೆ ಅಥವಾ ಕಿರುಕುಳವಿರದೆ ಸದರಿ ಪ್ರಮಾಣ ಪತ್ರಗಳನ್ನು ಒದಗಿಸುವ ವ್ಯವಸ್ಥೆಗೆ ಸರ್ಕಾರವು ಮುಂದಾಗುವುದೇ ; (ವಿವರ ನೀಡುವುದು)

(ಉ) ಅರ್ಹತಾ ಪ್ರಮಾಣ ಪತ್ರ ಪಡೆಯಲು ಅರ್ಜಿದಾರರು ಸಂಬಂಧಪಟ್ಟ ದಾಖಲೆಗಳನ್ನು ಸಲ್ಲಿಸಿದ್ದಾಗಿಯೂ ಕೂಡ ತಿಂಗಳುಗಟ್ಟಲೇ ಅಲೆದಾಡಿದರು ಪ್ರಮಾಣಪತ್ರ ಅರ್ಜಿದಾರರಿಗೆ ಸಿಗದೆ ಇರುವುದು ಸರ್ಕಾರದ ಗಮನಕ್ಕಿದೆಯೇ; ಇದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಕೆರೆಗಳಿಗೆ ನೀರು ತುಂಬಿಸುವ ಶಾಶ್ವತ ನೀರಾವರಿ ಯೋಜನೆಗಳು.

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೭೯ (೪೦೩) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋಲಾರ–ಚಿಕ್ಕಬಳ್ಳಾಪುರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಗಳಲ್ಲಿರುವ ಕೆರೆಗಳನ್ನು ತುಂಬಿಸಲು ಹಾಗೂ ಕೃಷಿ ಚಟುವಟಿಕೆಗಳಿಗೆ ನೀರುಣಿಸಲು ಸರ್ಕಾರ ರೂಪಿಸಿರುವ ಶಾಶ್ವತ ನೀರಾವರಿ ಯೋಜನೆಗಳಾವುವು ; (ಯೋಜನೆಗಳ ವಿವರಗಳನ್ನು ನೀಡುವುದು)

(ಆ) ಈ ಯೋಜನೆಗಳ ಅನುಷ್ಠಾನಕ್ಕಾಗಿ ತಗಲುವ ಅಂದಾಜು ವೆಚ್ಚ ಹಾಗೂ ಪೂರ್ಣಗೊಳಿಸಲು ಬೇಕಾಗಿರುವ ಅವಧಿ ಎಷ್ಟು ?

## ನೀರಾವರಿ ಸಂಪನ್ಮೂಲಗಳ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೮೦ (೪೦೧) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ನೀರಾವರಿ ಸಂಪನ್ಮೂಲಗಳನ್ನು ಅಂದಾಜಿಸಲಾಗಿದೆಯೇ; ಅಂದಾಜಿಸಿದ್ದಲ್ಲಿ, ಈ ಸಂಪನ್ಮೂಲಗಳ ಪ್ರಮಾಣ ಎಷ್ಟು; (ಅಣೆಕಟ್ಟುವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಮೇಲ್ಕಂಡ ಸಂಪನ್ಮೂಲಗಳ ಪ್ರಮಾಣದಲ್ಲಿ ಎಷ್ಟು ಪ್ರಮಾಣದ ಶೇಕಡವಾರು ನೀರಿನ ಸಂಪನ್ಮೂಲವನ್ನು ಸರ್ಕಾರ ಸದ್ಬಳಕೆ ಮಾಡಿಕೊಂಡಿದೆ;

(ಇ) ಇನ್ನೂ ಬಳಕೆ ಮಾಡಿಕೊಳ್ಳದ ನೀರಿನ ಪ್ರಮಾಣ ಎಷ್ಟು;

(ಈ) ಈ ನೀರನ್ನು ಬಳಕೆ ಮಾಡಿಕೊಳ್ಳಲು ಇರುವ ಅಡಚಣೆಗಳೇನು ? (ವಿವರ ನೀಡುವುದು)

## ಅರಣ್ಯ ಜಮೀನಿನ ಕುರಿತು

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೮೧ (೩೯೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿನ ಕುಡಿಯುವ ನೀರಿನ ಯೋಜನೆಗಳಿಗೆ ಅರಣ್ಯ ಮತ್ತು ಪರಿಸರ ಇಲಾಖೆಯಿಂದ ರಿಯಾಯಿತಿ ನೀಡಲಾಗಿದೆಯೇ ; (ವಿವರ ನೀಡುವುದು)



(ಆ) ಯಾವ ನಿಯಮದ ಅಡಿಯಲ್ಲಿ ಇಂತಹ ಸಾರ್ವಜನಿಕ ಮಹತ್ವದ ಯೋಜನೆಗಳಿಗೆ ರಿಯಾಯಿತಿ ನೀಡಲಾಗುತ್ತದೆ ?

## ಕೆರೆಗಳ ನಿರ್ವಹಣಾ ಪ್ರಾಧಿಕಾರ

**ಶ್ರೀ ವೈ. ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ):–**

೨೮೨ (೪೦೦) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆರೆಗಳ ನಿರ್ವಹಣಾ ಪ್ರಾಧಿಕಾರ ಅಸ್ತಿತ್ವದಲ್ಲಿದೆಯೇ; ಇದ್ದರೆ, ಇದರ ವ್ಯಾಪ್ತಿಗಳೇನು; ಎಷ್ಟು ಕೆರೆಗಳು ಇದರ ವ್ಯಾಪ್ತಿಗೊಳಪಡುತ್ತವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಕೋಲಾರ–ಚಿಕ್ಕಬಳ್ಳಾಪುರ ಜಿಲ್ಲೆಗಳ ವ್ಯಾಪ್ತಿಯಲ್ಲಿರುವ ಕೆರೆಗಳನ್ನೊಳಗೊಂಡಂತೆ, ವಿಶೇಷವಾದ ಆದ್ಯತಾ ವಲಯವನ್ನು ಸ್ಥಾಪಿಸಲು ಸರ್ಕಾರ ಯೋಚಿಸಿದೆಯೇ; ಹಾಗಿದ್ದರೆ, ಅದರ ರೂಪುರೇಷಗಳೇನು? (ಮಾಹಿತಿ ನೀಡುವುದು)

## ಅರಣ್ಯ ಒತ್ತುವರಿ ಮತ್ತು ಅಕ್ರಮ ರೆಸಾರ್ಟ್‌ಗಳ ಬಗ್ಗೆ

**ಶ್ರೀಮತಿ ವಿಮಲಾಗೌಡ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೩ (೪೦೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಿಂದ ರಾಜ್ಯದಲ್ಲಿ ಖಾಸಗಿಯವರು ಒತ್ತುವರಿ ಮಾಡಿಕೊಂಡಿರುವ ಅರಣ್ಯ ಪ್ರದೇಶದ ಭೂಮಿ ಎಷ್ಟು; (ಪ್ರದೇಶವಾರು ವಿವರ ನೀಡುವುದು)

(ಆ) ಅರಣ್ಯ ಪ್ರದೇಶದಲ್ಲಿ ಅಕ್ರಮವಾಗಿ ರೆಸಾರ್ಟ್‌ಗಳ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಇದುವರೆವಿಗೂ ಇಂತಹ ಎಷ್ಟು ರೆಸಾರ್ಟ್‌ಗಳನ್ನು ಸರ್ಕಾರ ಗುರುತಿಸಿದೆಯೇ;

(ಇ) ಅಕ್ರಮವಾಗಿ ಒತ್ತುವರಿ ಮಾಡಿಕೊಂಡಿರುವ ಒತ್ತುವರಿದಾರರೊಂದಿಗೆ ಇಲಾಖಾ ಅಧಿಕಾರಿಗಳು ಶಾಮೀಲಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇಂತಹ ಅಕ್ರಮಗಳಲ್ಲಿ ಪಾಲ್ಗೊಂಡಂತಹ ಅಧಿಕಾರಿ/ನೌಕರರ ವಿರುದ್ಧ ಸರ್ಕಾರ ಯಾವ ಕ್ರಮ ಕೈಗೊಂಡಿದೆ ?

## ರಾಜ್ಯದಲ್ಲಿನ ಸಣ್ಣ ನೀರಾವರಿ ಇಲಾಖೆಯಿಂದ ಒಟ್ಟು ಕೆರೆಗಳ ಬಗ್ಗೆ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೪ (೪೦೬) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಒಟ್ಟು ಎಷ್ಟು ಕೆರೆಗಳಲ್ಲಿ ಹೂಳೆತ್ತುವ ಕೆಲಸವಾಗಿದೆ ; ಯಾವ ಯಾವ ಜಿಲ್ಲೆಗೆ ಎಷ್ಟು ಅನುದಾನ ನೀಡಲಾಗಿದೆ ;



(ಆ) ಹಾವೇರಿ ಜಿಲ್ಲೆಯಲ್ಲಿ ಎಷ್ಟು ಕೆರೆಗಳ ಹೂಳನ್ನು ಎತ್ತಲಾಗಿದೆ ? (ತಾಲ್ಲೂಕುವಾರು ಕೆರೆಗಳ ಹೆಸರು, ಊರಿನ ಹೆಸರು, ಕೆರೆಯ ವಿಸ್ತೀರ್ಣ ಅವುಗಳಿಗೆ ಖರ್ಚಾದ ಮೊತ್ತದ ವಿವರ ಒದಗಿಸುವುದು)

## ಕೃಷ್ಣ ಮೃಗ ಅಭ್ಯಯಾರಣ್ಯ

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೫ (೪೦೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಒಟ್ಟು ಎಷ್ಟು ಜಿಲ್ಲೆಗಳಲ್ಲಿ ಯಾವ ಯಾವ ತಾಲ್ಲೂಕುಗಳಲ್ಲಿ ಕೃಷ್ಣ ಮೃಗ ಅಭಯಾರಣ್ಯವಿದೆ;

ಆ) ಪ್ರತಿಯೊಂದು ಅಭಯಾರಣ್ಯವು ಎಷ್ಟು ವಿಸ್ತೀರ್ಣ ಒಳಗೊಂಡಿದೆ; ಅಲ್ಲಿ ಎಷ್ಟು ಜಿಂಕೆಗಳಿವೆ; ಇವುಗಳಲ್ಲಿ ಯಾವ ಯಾವ ಅನುಕೂಲಗಳಿವೆ;

ಇ) ಈ ಅಭಯಾರಣ್ಯದ ಜಿಂಕೆಗಳು ಹೊರಗೆ ರೈತರ ಜಮೀನುಗಳಲ್ಲಿ ಪೈರನ್ನು ನಾಶ ಪಡಿಸುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ?

## ಹಾವೇರಿ ಜಿಲ್ಲೆಯ ಏಳು ತಾಲ್ಲೂಕುಗಳಲ್ಲಿನ ಕ್ರೀಡಾಂಗಣದ ವ್ಯವಸ್ಥೆ ಬಗ್ಗೆ.

**ಶ್ರೀ ಸೋಮಣ್ಣ ಮ. ಬೇವಿನಮರದ (ವಿಧಾನಸಭೆಯಿಂದ ಚುನಾಯಿತರಾದವರು):–**

೨೮೬ (೪೦೫) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಹಾವೇರಿ ಜಿಲ್ಲೆಯ ಏಳು ತಾಲ್ಲೂಕುಗಳಲ್ಲಿ ಕ್ರೀಡಾಂಗಣ ವ್ಯವಸ್ಥೆ ಮಾಡಲಾಗಿದೆಯೇ ;

(ಆ) ಮಾಡಿದ್ದರೆ, ಎಷ್ಟು ವಿಸ್ತೀರ್ಣದಲ್ಲಿ ನಿರ್ಮಾಣ ಆಗಿದೆ ; ಕ್ರೀಡಾಂಗಣಗಳ ನಿರ್ಮಾಣಕ್ಕಾಗಿ ತಗಲಿರುವ ವೆಚ್ಚವೆಷ್ಟು ; (ತಾಲ್ಲೂಕುವಾರು ಕ್ರೀಡಾಂಗಣವಾರು ವಿವರ ನೀಡುವುದು)

(ಇ) ಯಾವ ವರ್ಷದಲ್ಲಿ ಕ್ರೀಡಾಂಗಣ ನಿರ್ಮಾಣಗೊಂಡಿದೆ ;

(ಈ) ಪ್ರಸ್ತುತ ಈ ಕ್ರೀಡಾಂಗಣ ಸುವ್ಯವಸ್ಥೆಯಲ್ಲಿ ಇದೆಯೇ ?

## ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕ ಇಲಾಖೆಯ ಕಟ್ಟಡದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ):–**

೨೮೭ (೪೧೩) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕಾರ್ಮಿಕ ಇಲಾಖೆಯ ಕಟ್ಟಡದ ಬಾಡಿಗೆ ಎಷ್ಟು; ಎಷ್ಟು ವರ್ಷಗಳ ಅವಧಿಗೆ ಈ ಕಟ್ಟಡವನ್ನು ಪಡೆಯಲಾಗಿದೆ; ಮತ್ತು ಯಾವ ಮಹಡಿಯವರೆಗೆ ಕಾರ್ಯನಿರ್ವಹಿಸುತ್ತಿದೆ; (ವಿವರ ನೀಡುವುದು)



(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಕಾರ್ಮಿಕ ಇಲಾಖೆಗೆ ಕಟ್ಟಡ ನಿರ್ಮಾಣ ಮಾಡಲು ಸ್ಥಳವನ್ನು ಗುರುತಿಸಿದ್ದರೂ, ಈ ಬಗ್ಗೆ ಇಲಾಖೆಯು ಪ್ರೋತ್ಸಾಹ ತೋರಿಸುತ್ತಿಲ್ಲ ಎಂಬುದು ನಿಜವೇ; ಸ್ವಂತ ಕಟ್ಟಡ ನಿರ್ಮಾಣ ಯಾವ ಹಂತದಲ್ಲಿದೆ;

(ಇ) ಅಸಂಘಟಿತ ಕಾರ್ಮಿಕರಿಗೆ ಒದಗಿಸಲಾಗಿರುವ ಸ್ವಾವಲಂಬನೆ ಯೋಜನೆಯನ್ನು ನಿಲ್ಲಿಸಲಾಗಿದೆಯೇ; ಯಾವ ಉದ್ದೇಶಕ್ಕಾಗಿ ನಿಲ್ಲಿಸಲಾಗಿದೆ ? (ವಿವರ ನೀಡುವುದು)

## 'ರಾಷ್ಟ್ರೀಯ ಮಟ್ಟದ ಫೆಡರೇಷನ್ ಕಪ್'ಗೆ ತಗುಲಿದ ಖರ್ಚಿನ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :–**

೨೮೮ (೪೧೦) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಿನಾಂಕ: ೩೦.೦೪.೨೦೧೫ ರಿಂದ ೦೪.೦೫.೨೦೧೫ರವರೆಗೆ ಮಂಗಳೂರಿನಲ್ಲಿ ನಡೆದ "ರಾಷ್ಟ್ರೀಯ ಮಟ್ಟದ ಫೆಡರೇಷನ್ ಕಪ್"ಗೆ ತಗುಲಿದ ಒಟ್ಟು ಖರ್ಚು ಎಷ್ಟು; ಸಂಗ್ರಹವಾದ ಹಣವೆಷ್ಟು; ಸರ್ಕಾರದಿಂದ ನೀಡಿದ ಅನುದಾನ ಎಷ್ಟು;

(ಆ) ಕ್ರೀಡಾಕೂಟಕ್ಕೆ ಖರೀದಿಸಿದ ಸಲಕರಣೆಯ ವೆಚ್ಚ ಎಷ್ಟು ;

(ಇ) ಫೆಡರೇಷನ್ ಕಪ್‌ನಲ್ಲಿ ದೇಶದಾದ್ಯಂತ ಭಾಗವಹಿಸಿದ ಕ್ರೀಡಾಳುಗಳ ಸಂಖ್ಯೆ ಎಷ್ಟು; ಫೆಡರೇಷನ್ ಕಫ್ ಸಂವಿಧ ಕ್ರೀಡಾಂಗಣ ರಿಪೇರಿಗಾಗಿ ಮಾಡಿದ ವೆಚ್ಚ ಎಷ್ಟು; ಯಾವ ಯಾವ ರಾಜ್ಯದಿಂದ ಎಷ್ಟೆಷ್ಟು; (ವಿವರ ನೀಡುವುದು)

(ಈ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿ "ಅಂತರಾಷ್ಟ್ರೀಯ ಮಟ್ಟದ ಕ್ರಿಕೆಟ್ ಕ್ರೀಡಾಂಗಣ"ಕ್ಕೆ ಬೊಂದೇಲ್‌ನಲ್ಲಿ ಸ್ಥಳ ಗುರುತಿಸಲಾಗಿದ್ದು, ಈ ಬಗ್ಗೆ ಇಲಾಖೆಯು ಕೈಗೊಂಡ ಕ್ರಮಗಳೇನು; ಎಷ್ಟು ಎಕರೆ ಭೂಮಿಯನ್ನು ಗುರುತಿಸಲಾಗಿದೆ; (ವಿವರ ನೀಡುವುದು)

(ಉ) ಅಂತರ್‌ರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ರಚನೆಗೆ ತಗಲುವ ವೆಚ್ಚ ಎಷ್ಟು; ಅಂತರ್‌ರಾಷ್ಟ್ರೀಯ ಮಟ್ಟದ ಕ್ರೀಡಾಂಗಣ ರಚನೆಗೆ ಇಲಾಖೆಯು ಅನುದಾನ ಮಂಜೂರು ಮಾಡುವುದೇ; ಈ ಬಗ್ಗೆ ಇಲಾಖೆಯ ಮುಂದೆ ಪ್ರಸ್ತಾವನೆ ಇದೆಯೇ;

(ಊ) ಮಂಗಳೂರಿನಲ್ಲಿ ಸ್ಥಾಪಿಸಲು ಉದ್ದೇಶಿಸಿದ್ದ ಅಂತರ್‌ರಾಷ್ಟ್ರೀಯ ಮಟ್ಟದ ಈಜುಕೊಳದ ಕಾಮಗಾರಿ ವಿಳಂಬಗೊಳ್ಳಲು ಕಾರಣವೇನು ? (ವಿವರ ನೀಡುವುದು)

## ಡಾ: ಕಸ್ತೂರಿರಂಗನ್ ವರದಿಯ ಬಗ್ಗೆ ರಾಜ್ಯ ಪರಿಸರ ಇಲಾಖೆ ಕೈಗೊಂಡಿರುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :–**

೨೮೯ (೪೧೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ: ಕಸ್ತೂರಿರಂಗನ್ ವರದಿಯ ಬಗ್ಗೆ ರಾಜ್ಯ ಪರಿಸರ ಇಲಾಖೆ ಕೈಗೊಂಡ ಅಂತಿಮ ನಿರ್ಣಯಗಳೇನು; ಈ ವರದಿಯ ಬಗ್ಗೆ



ಸರ್ಕಾರ ಆಕ್ಷೇಪ ವ್ಯಕ್ತಪಡಿಸಿದೆಯೇ; ಸಾರ್ವಜನಿಕ ಅಭಿಪ್ರಾಯಕ್ಕೆ ಮನ್ನಣೆ ನೀಡಲಾಗಿದೆಯೇ; (ನೀಡಿದ್ದರೆ ವಿವರಗಳನ್ನು ಒದಗಿಸುವುದು)

(ಆ) ಡಾ: ಕಸ್ತೂರಿರಂಗನ್ ವರದಿ ಜಾರಿಗೆ ಬಂದರೆ ಅರಣ್ಯ ಪ್ರದೇಶದ ಸುತ್ತಮುತ್ತಲು ಇರುವ ಜನರನ್ನು ಒಕ್ಕಲೆಬ್ಬಿಸುವ ಬಗ್ಗೆ ಭೀತಿಯಲ್ಲಿ ಇಲಾಖೆ ಕೈಗೊಂಡ ಕ್ರಮಗಳೇನು; ಈ ವರದಿಯು ಜಾರಿಗೆ ಬರುವುದು ಯಾವಾಗ;

(ಇ) ಈ ವರದಿಯ ಶಿಫಾರಸ್ಸಿನ ಅನ್ವಯ ರಾಜ್ಯದ ಅರಣ್ಯ ಪ್ರದೇಶಗಳಲ್ಲಿ ವಾಸವಿರುವ ಜನರ ಮೇಲೆ ಬೀರುವ ಪರಿಣಾಮಗಳೇನು; ಈ ವರದಿಯನ್ನು ತಿರಸ್ಕರಿಸಲು ಸರ್ಕಾರದ ಸಲಹೆಗಳೇನು;

(ಈ) ಡೀಮ್ಡ್ ಫಾರೆಸ್ಟ್ ಪ್ರದೇಶಗಳಲ್ಲಿ ವಾಸವಿರುವ ಕುಟುಂಬಗಳಿಗೆ ಡಾ: ಕಸ್ತೂರಿರಂಗನ್ ವರದಿಯಿಂದ ಒಕ್ಕಲೆಬ್ಬಿಸಲಾಗಿದೆಯೇ; (ವಿವರ ನೀಡುವುದು)

(ಉ) ಅರಣ್ಯ ಪ್ರದೇಶದ ಸುತ್ತಲು ವಾಸಿಸುತ್ತಿರುವ ಕೃಷಿಕರು ಅಕ್ರಮ–ಸಕ್ರಮದ ಅಡಿಯಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪುರಸ್ಕರಿಸಲಾಗಿದೆಯೇ ?

## ಬೇಂಗ್ರೆ ಕಸಬಾ ಗ್ರಾಮದಲ್ಲಿ ಗಾಲ್ಫ್ ಕ್ಲಬ್ ಸ್ಥಾಪನೆ ಬಗ್ಗೆ.

**ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ) :–**

೨೯೦ (೪೦೯) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ಬೇಂಗ್ರೆ ಕಸಬಾ ಗ್ರಾಮದಲ್ಲಿ ಗಾಲ್ಫ್ ಕ್ಲಬ್ ಸ್ಥಾಪನೆಗೆ ಸರಕಾರ ನೀಡಿದ ಭೂಮಿಯ ವಿಸ್ತೀರ್ಣ ಎಷ್ಟು; ಯಾವ ಯಾವ ಷರತ್ತುಗಳಲ್ಲಿ ನೀಡಲಾಗಿದೆ ; (ವಿವರ ನೀಡುವುದು)

ಆ) ಗಾಲ್ಫ್ ಕ್ಲಬ್‌ಗೆ ನೀಡಿದ ಭೂಮಿಯಲ್ಲಿರುವ ಅರಣ್ಯ ಪ್ರದೇಶ ಎಷ್ಟು; (CRZ (Costal Regulate Zone) ಇದರ ನಿಯಮದಂತೆ ಅನುಮತಿ ಪಡೆಯಲಾಗಿದೆಯೇ;

ಇ) ಗಾಲ್ಫ್ ಕ್ಲಬ್‌ಗೆ ನೀಡಿದ ಭೂಮಿಯು ಸಾರ್ವಜನಿಕರು ಮತ್ತು ಸ್ಥಳೀಯರು ಕ್ರೀಡೆ ಇನ್ನಿತರ ಚಟುವಟಿಕೆಗಳಿಗೆ ಉಪಯೋಗಿಸುತ್ತಿದ್ದು, ಸ್ಥಳೀಯರಿಗೆ ಬೇರೆ ವ್ಯವಸ್ಥೆ ಮಾಡಲಾಗಿದೆಯೇ;

ಈ) ಸದರಿ ಭೂಮಿಯನ್ನು ನೀಡಿರುವುದರಿಂದ ಸ್ಥಳೀಯ ದ್ವೀಪದಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ, ಮೀನುಗಾರಿಕೆಗೆ ತೊಂದರೆ ಆಗುವ ಬಗ್ಗೆ ಸರ್ಕಾರ ಗಮನಿಸಲಾಗಿದೆಯೇ ? (ವಿವರ ನೀಡುವುದು)



## ವಿಶ್ವ ಬ್ಯಾಂಕ್ ನೆರವಿನೊಂದಿಗೆ DRIP ಯೋಜನೆ ಅನುಷ್ಠಾನಗೊಳಿಸುವುದು.

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೧ (೪೧೯) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದ ಜಲಾಶಗಳ ಪುನಶ್ಚೇತನಕ್ಕೆ ಸಂಬಂಧಿಸಿದ ವಿಶ್ವ ಬ್ಯಾಂಕ್ ನೆರವಿನ DRIP ಯೋಜನೆ ರಾಜ್ಯದಲ್ಲಿ ಸಮರ್ಪಕವಾಗಿ ಅನುಷ್ಠಾನವಾಗದೆ ಇರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಅಣೆಕಟ್ಟು ಪುನಶ್ಚೇತನ ಮತ್ತು ಅಭಿವೃದ್ಧಿ ಯೋಜನೆಯಡಿ ರಾಜ್ಯದ ಯಾವ ಯಾವ ಜಲಾಶಯಗಳನ್ನು ಪುನಶ್ಚೇತನಗೊಳಿಸಲು ಆಯ್ಕೆ ಮಾಡಲಾಗಿದೆ;

ಇ) ಸದರಿ ವಿಶ್ವ ಬ್ಯಾಂಕ್ ಯೋಜನೆಗೆ ಅಣೆಕಟ್ಟುಗಳ ಪುನಶ್ಚೇತನಗೊಳಿಸಲು ಅಂದಾಜು ಪಟ್ಟಿಯನ್ನು ತಯಾರಿಸಲಾಗಿದೆಯೇ; (ಅಣೆಕಟ್ಟುವಾರು ಮಾಹಿತಿ ಒದಗಿಸುವುದು)

ಈ) ಈಗಾಗಲೇ, ಯಾವ ಯಾವ ಅಣೆಕಟ್ಟುಗಳ ಪುನಶ್ಚೇತನ ಕಾಮಗಾರಿಗೆ ಟೆಂಡರ್ ಕರೆಯಲಾಗಿದೆ;

ಉ) ಇನ್ನು ಯಾವ ಯಾವ ಅಣೆಕಟ್ಟುಗಳ ಪುನಶ್ಚೇತನ ಕಾಮಗಾರಿಯ ಟೆಂಡರ್ ಕರೆಯಬೇಕಾಗಿದೆ; ಅವುಗಳನ್ನು ಯಾವ ಯಾವ ಕಾಲಮಿತಿಯಲ್ಲಿ ಟೆಂಡರ್ ಕರೆಯಲಾಗುವುದು;

ಊ) ಸದರಿ ಪುನಶ್ಚೇತನ ಕಾಮಗಾರಿಗಳಿಗೆ ವಿಶ್ವ ಬ್ಯಾಂಕಿನಿಂದ ಬಿಡುಗಡೆಯಾಗಿರುವ ಅನುದಾನವೆಷ್ಟು ?

## ಕಾರ್ಮಿಕರಿಗಾಗಿ ಇ.ಎಸ್.ಐ. ಆಸ್ಪತ್ರೆಗಳ ಸ್ಥಾಪನೆ ಕುರಿತು.

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೨ (೪೨೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

ಅ) ರಾಜ್ಯದಲ್ಲಿ ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರಿಗಾಗಿ ಇ.ಎಸ್.ಐ. ಆಸ್ಪತ್ರೆಗಳನ್ನು ಸ್ಥಾಪಿಸಿರುವುದು ನಿಜವೇ;

ಆ) ಹಾಗಿದ್ದಲ್ಲಿ, ರಾಜ್ಯದಲ್ಲಿ ಯಾವ ಯಾವ ಜಿಲ್ಲೆಗಳಲ್ಲಿ ಆಸ್ಪತ್ರೆಗಳನ್ನು ಸ್ಥಾಪಿಸಲಾಗಿದೆ; ಕಾರ್ಮಿಕರಿಗೆ ಯಾವ ಯಾವ ಚಿಕಿತ್ಸೆಗಳಿಗೆ ಸೌಲಭ್ಯ ಒದಗಿಸಲಾಗುತ್ತಿದೆ;

ಇ) ಸಂಘಟಿತ ಮತ್ತು ಅಸಂಘಟಿತ ಕಾರ್ಮಿಕರಿಗಾಗಿ (Open Heart Surgery & Cancer) ಚಿಕಿತ್ಸೆಗಾಗಿ ವಿಶೇಷ ನೆರವು ನೀಡಲಾಗುತ್ತಿದೆಯೇ;



ಈ) ಉತ್ತರ ಕರ್ನಾಟಕ ಭಾಗದಲ್ಲಿ ವಿಶೇಷವಾಗಿ ಬೆಳಗಾವಿ ಜಿಲ್ಲೆಯಲ್ಲಿ ಇಂತಹ ಆಸ್ಪತ್ರೆಗಳನ್ನು ತೆರೆಯುವ ವಿಚಾರ ಸರ್ಕಾರದ ಮುಂದಿದೆಯೇ; ಹಾಗಿದ್ದಲ್ಲಿ, ಯಾವ ಕಾಲಮಿತಿಯಲ್ಲಿ ಆಸ್ಪತ್ರೆಗಳನ್ನು ತೆರೆಯಲಾಗುವುದು ?

## ಅಕಾಲಿಕ ಮಳೆಯಿಂದ ಬೆಳೆ ಹಾನಿ

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೨೯೩ (೪೧೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯಲ್ಲಿ ಕಳೆದ ಮಾರ್ಚ್, ಏಪ್ರಿಲ್ ಹಾಗೂ ಮೇ ತಿಂಗಳಲ್ಲಿ ಸುರಿದ ಅಕಾಲಿಕ ಮಳೆಯಿಂದಾಗಿ ರೈತರಿಗೆ ಅಪಾರ ನಷ್ಟ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಜಿಲ್ಲೆಯಲ್ಲಿ ಯಾವ ಯಾವ ಬೆಳೆಗಳು ಹಾನಿಗೊಳಗಾಗಿವೆ; ಬೆಳೆ ಹಾನಿಯ ಪ್ರಮಾಣ ಎಷ್ಟು;

(ಇ) ಹಾನಿಗೊಳಗಾದ ರೈತರಿಗೆ ಪರಿಹಾರ ವಿತರಿಸಲಾಗಿದೆಯೇ ; ಯಾವ ಪ್ರಮಾಣದಲ್ಲಿ ಪರಿಹಾರ ವಿತರಿಸಲಾಗಿದೆ;

(ಈ) ಪರಿಹಾರ ವಿತರಿಸದೆ ಇದ್ದಲ್ಲಿ ಅದಕ್ಕೆ ಕಾರಣಗಳೇನು; ಪರಿಹಾರವನ್ನು ಯಾವ ಕಾಲಮಿತಿಯಲ್ಲಿ ವಿತರಿಸಲಾಗುವುದು ?

## ಜವಳಿ ಪಾರ್ಕ್ ಕಾಮಗಾರಿಗಳು.

**ಶ್ರೀ ಕವಟಗಿಮಠ ಮಹಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :–**

೨೯೪ (೪೨೦) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆಯ ಚಿಕ್ಕೋಡಿ ತಾಲ್ಲೂಕಿನ ಬೋರಗಾಂವ ಮತ್ತು ಖಾನಪೂರ ತಾಲ್ಲೂಕಿನ ವಾಘವಾಡೆಯಲ್ಲಿ ನಿರ್ಮಿಸಲು ಉದ್ದೇಶಿಸಿರುವ ಜವಳಿ ಪಾರ್ಕ್‌ಗಳ ಕಾಮಗಾರಿಯನ್ನು ಕೈಗೊಳ್ಳದೆ ಇರುವುದರಿಂದ ಜವಳಿ ಉದ್ಯಮ ಹಾಗೂ ನೇಕಾರರಿಗೆ ನಿರಾಸೆ ಮೂಡಿಸಿರುವ ವಿಚಾರ ಸರಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಸದರಿ ಗ್ರಾಮದಲ್ಲಿ ನಿರ್ಮಿಸಲು ಉದ್ದೇಶಿರುವ ಜವಳಿ ಪಾರ್ಕ್‌ಗಳನ್ನು ಯಾವಾಗ ಪ್ರಾರಂಭಿಸಲಾಗುವುದು;

(ಇ) ಜವಳಿ ಪಾರ್ಕ್ ನಿರ್ಮಿಸಲು ಸರಕಾರವು ಬಿಡುಗಡೆ ಮಾಡಿರುವ ಅನುದಾನವೆಷ್ಟು ; ಅದರಲ್ಲಿ ಖರ್ಚು ಮಾಡಿರುವ ಅನುದಾನವೆಷ್ಟು;

(ಈ) ಯಾವ ಕಾಲಮಿತಿಯಲ್ಲಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ?



## ವನ್ಯ ಜೀವಿಗಳ ದಾಳಿಗಳಿಂದ ರೈತರ ಬೆಳೆ ನಾಶವಾಗುವುದು.

ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–

೨೯೫ (೪೨೨) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವನ್ಯ ಜೀವಿಗಳ ದಾಳಿಯಿಂದ ರೈತರ ಬೆಳೆಗಳು ನಾಶವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ರೈತರನ್ನು ಈ ಸಂಕಷ್ಟದಿಂದ ಪಾರು ಮಾಡಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ಪರಿಸರ ಅಭಿವೃದ್ಧಿಗಾಗಿ ಹೆಚ್ಚಿನ ಗಿಡಮರಗಳನ್ನು ಬೆಳೆಸಲು/ ಸಂರಕ್ಷಿಸಲು ಜೈಲುವಾಸಿಗಳ ಸೇವೆಯನ್ನು ಪಡೆಯುವ ಯೋಜನೆಯನ್ನು ಸರ್ಕಾರವು ರೂಪಿಸುವುದೇ. ಹಾಗಿದ್ದಲ್ಲಿ ಯಾವಾಗ ರೂಪಿಸಲಾಗುವುದು ?

## ಪರಿಸರ ಅಭಿವೃದ್ಧಿ ಮತ್ತು ಸಂರಕ್ಷಣೆ

ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–

೨೯೬ (೪೨೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪರಿಸರ ಮಾಲಿನ್ಯದಿಂದ ನರಳುತ್ತಿರುವ ಇಂದಿನ ಸಮಾಜದಲ್ಲಿ ಮಕ್ಕಳಲ್ಲಿ ಪರಿಸರ ಅಭಿವೃದ್ಧಿ ಮತ್ತು ಸಂರಕ್ಷಣೆ ಕುರಿತು ಅರಿವು ಮೂಡಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ನಿಟ್ಟಿನಲ್ಲಿ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ;

(ಇ) ಉತ್ತರ ಕರ್ನಾಟಕದ ಎಷ್ಟು ತಾಲ್ಲೂಕುಗಳಲ್ಲಿ ಮರಗಿಡಗಳನ್ನು ಬೆಳೆಸಲು ಮತ್ತು ಅರಣ್ಯ ಪ್ರದೇಶವನ್ನು ಅಭಿವೃದ್ಧಿ ಪಡಿಸಲು ಸರ್ಕಾರವು ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ?

## ನೇಕಾರರಿಗೆ ಮೂಲಭೂತ ಸೌಕರ್ಯ ಒದಗಿಸುವುದು.

**ಡಾ: ಮತ್ತಿಕಟ್ಟಿ ವೀರಣ್ಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯೭ (೪೨೩) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮರ್ಪಕ ವಿದ್ಯುತ್ ಮತ್ತು ಮೂಲ ಸೌಲಭ್ಯಗಳಿಲ್ಲದೆ ನೇಕಾರರು ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ ನೇಕಾರರನ್ನು ವೃತ್ತಿ ಮತ್ತು ವಸತಿ ಸಮಸ್ಯೆಗಳಿಂದ ಪಾರು ಮಾಡಲು ಸರ್ಕಾರವು ಕೈಗೊಳ್ಳುತ್ತಿರುವ ಕ್ರಮಗಳೇನು;

(ಇ) ವಿಶಿಷ್ಟ ಶೈಲಿಯ ಇಳಕಲ್, ಗುಳೇದಗುಡ್ಡ ಮತ್ತು ಮೊಳಕಾಲ್ಮೂರು ಜವಳಿ ಉತ್ಪನ್ನಗಳನ್ನು ಉತ್ತೇಜಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳುತ್ತಿದೆ ?



## ಬಗರ್‌ಹುಕ್ಂನಡಿಯಲ್ಲಿ ವ್ಯವಸಾಯ ಮಾಡುತ್ತಿರುವ ರೈತರ ಬಗ್ಗೆ.

ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–

೨೯೮ (೪೨೫) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಜಮೀನನ್ನು ಬಗರ್‌ಹುಕ್ಂನಡಿಯಲ್ಲಿ ವ್ಯವಸಾಯ ಮಾಡುತ್ತಿರುವ ರೈತರ ಸಂಖ್ಯೆ ಎಷ್ಟು ;

(ಆ) ಕಳೆದ ಮೂರು ವರ್ಷಗಳಿಂದ ಈ ಬಗರ್‌ಹುಕ್ಂನಡಿಯಲ್ಲಿ ವ್ಯವಸಾಯ ಭೂಮಿಯನ್ನು ಸಕ್ರಮಗೊಳಿಸಲು ಅರ್ಜಿ ಸಲ್ಲಿಸಿರುವವರ ಸಂಖ್ಯೆ ಎಷ್ಟು ;

(ಇ) ಕಳೆದ ಮೂರು ವರ್ಷಗಳಿಂದ ಸಕ್ರಮಗೊಳಿಸಿರುವ ಹಾಗೂ ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು ?

## ರಾಜ್ಯದಲ್ಲಿರುವ ಪ್ರಾಣಿ ಸಂಗ್ರಹಾಲಯಗಳು

**ಶ್ರೀ ದಯಾನಂದ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೯೯ (೪೨೬) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಪ್ರಾಣಿ ಸಂಗ್ರಹಾಲಯಗಳ ಸಂಖ್ಯೆ ಎಷ್ಟು ; ಕಳೆದ ಮೂರು ವರ್ಷದಿಂದ ಯಾವ ಯಾವ ಪ್ರಾಣಿ ಪಕ್ಷಿಗಳು ಹೊಸದಾಗಿ ಪ್ರಾಣಿ ಸಂಗ್ರಹಾಲಯಕ್ಕೆ ಸೇರ್ಪಡೆಗೊಂಡಿವೆ ಹಾಗೂ ಎಷ್ಟು ಅವಸಾನಗೊಂಡಿವೆ ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಅವಸಾನದ ಅಂಚಿನಲ್ಲಿರುವ ಪ್ರಾಣಿ ಪಕ್ಷಿಗಳ ಸಂಖ್ಯೆ ಎಷ್ಟು ; ಇವುಗಳ ರಕ್ಷಣೆಗೆ ಸರ್ಕಾರವು ಹಮ್ಮಿಕೊಂಡಿರುವ ಕ್ರಮಗಳೇನು ;

(ಇ) ಕಳೆದ ಮೂರು ವರ್ಷಗಳಿಂದ ಪ್ರಾಣಿ ಸಂಗ್ರಹಾಲಯದಿಂದ ಬಂದಿರುವ ಆದಾಯ ಮತ್ತು ವೆಚ್ಚವೆಷ್ಟು ? (ಸಂಪೂರ್ಣ ವಿವರಗಳನ್ನು ನೀಡುವುದು)

## ಅರಣ್ಯ ಭೂಮಿ ಒತ್ತುವರಿ ಆಗಿರುವ ಕುರಿತು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೦ (೪೨೯) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ಅರಣ್ಯ ಪ್ರದೇಶದಲ್ಲಿ ಭೂ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಈ ಎರಡು ಜಿಲ್ಲೆಯಲ್ಲಿ ಎಷ್ಟು ಅರಣ್ಯ ಭೂಮಿ ಒತ್ತುವರಿ ಆಗಿದೆ ;

(ಇ) ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳಾವುವು; ಭೂ ಒತ್ತುವರಿ ಮಾಡಿರುವವರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳಾವುವು ?



## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯ ನೀರಾವರಿ ಯೋಜನೆ

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೧ (೪೨೮) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿ ನೀರಾವರಿ ಇಲಾಖೆಯಿಂದ ಯಾವ ಯಾವ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ; (ಯೋಜನಾವಾರು ವಿವರ ನೀಡುವುದು)

(ಆ) ಸದರಿ ಯೋಜನೆಗಳಿಗೆ ಸರ್ಕಾರ ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಖರ್ಚಾದ ಅನುದಾನ ಎಷ್ಟು ? (ತಾಲ್ಲೂಕುವಾರು, ಯೋಜನೆವಾರು ವಿವರ ನೀಡುವುದು)

## ಬಾಲ ಕಾರ್ಮಿಕರ ಕುರಿತು

**ಶ್ರೀ ಅಲ್ಲಮಪ್ರಭು ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೦೨ (೪೨೭) ವಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಇಲ್ಲಿಯವರೆಗೆ ಪತ್ತೆ ಹಚ್ಚಲಾದ ಬಾಲ ಕಾರ್ಮಿಕರ ಸಂಖ್ಯೆ ಎಷ್ಟು ;

(ಆ) ಬಾಲ ಕಾರ್ಮಿಕರಿಗೆ ಸಂಬಂಧಪಟ್ಟ ಪ್ರಕರಣಗಳಲ್ಲಿ ನ್ಯಾಯಾಲಯಗಳಲ್ಲಿ ವಿಚಾರಣೆ ನಡೆಸಿ ಅಂತಿಮಗೊಂಡು ಶಿಕ್ಷೆ ವಿಧಿಸಲಾದವರ ಸಂಖ್ಯೆ ಎಷ್ಟು ;

(ಇ) ಬಾಲ ಕಾರ್ಮಿಕರನ್ನು ರಕ್ಷಿಸಿ ಅವರ ಪುನರ್ ವಸತಿ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ಸವದತ್ತಿ ತಾಲ್ಲೂಕಿನ ಚಚಡಿ ಗ್ರಾಮದ ಹತ್ತಿರ ಇಂಗು ಕೆರೆ ನಿರ್ಮಾಣ ಮಾಡುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೩ (೪೩೨) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸವದತ್ತಿ ತಾಲ್ಲೂಕಿನ ಚಚಡಿ ಗ್ರಾಮದ ಹತ್ತಿರ ಒಂದು ಇಂಗು ಕೆರೆ ನಿರ್ಮಾಣ ಮಾಡಲು ಸರ್ಕಾರಕ್ಕೆ ಪ್ರಸ್ತಾವನೆ ಬಂದಿರುವುದು ನಿಜವೇ;

(ಆ) ಸದರಿ ಗ್ರಾಮದ ಸುತ್ತಮುತ್ತಲೂ ಯಾವುದೇ ರೀತಿ ನೀರಾವರಿ ಸೌಲಭ್ಯಗಳಿಲ್ಲದಿರುವುದು ಮತ್ತು ಈ ಭಾಗದಲ್ಲಿ ಅಂತರ್ಜಲ ಮಟ್ಟ ತೀರಾ ಕಡಿಮೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಈ ಇಂಗು ಕೆರೆ ನಿರ್ಮಾಣ ಮಾಡಲು ಸೂಕ್ತ ಕ್ರಮ ಕೈಗೊಳ್ಳಲಾಗುವುದೇ;

(ಈ) ಈ ಇಂಗು ಕೆರೆ ನಿರ್ಮಾಣ ಮಾಡಲು ಬೇಕಾಗುವ ಒಟ್ಟು ವೆಚ್ಚವೆಷ್ಟು ?



## ಸೊಗಲ ಕ್ಷೇತ್ರದಲ್ಲಿರುವ ಜಿಂಕೆ ವನವನ್ನು ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೪ (೪೩೫) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸವದತ್ತಿ ತಾಲ್ಲೂಕಿನ ಸೊಗಲ ಕ್ಷೇತ್ರದಲ್ಲಿರುವ ಜಿಂಕೆ ವನವನ್ನು ಅಭಿವೃದ್ಧಿಪಡಿಸಲು ಸರ್ಕಾರಕ್ಕೆ ಈಗಾಗಲೇ ಅನೇಕ ಬಾರಿ ವಿನಂತಿ ಮಾಡಿಕೊಂಡಿದ್ದು ನಿಜವೇ ;

(ಆ) ಸದರಿ ಜಿಂಕೆ ವನದ ಅಭಿವೃದ್ಧಿಗಾಗಿ ಬೇಕಾಗುವ ಹಣವೆಷ್ಟು ;

(ಇ) ಸದರಿ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು ?

## ರಾಮದುರ್ಗ ತಾಲ್ಲೂಕಿನ ಚಂದರಗಿಯ ಕ್ರೀಡಾ ಶಾಲೆಗೆ ಮೂಲಭೂತ ಸೌಲಭ್ಯ ಒದಗಿಸುವ ಬಗ್ಗೆ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೫ (೪೩೩) ಮಾನ್ಯ ಯುವ ಸಬಲೀಕರಣ ಮತ್ತು ಕ್ರೀಡಾ ಹಾಗೂ ಮೀನುಗಾರಿಕೆ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳಗಾವಿ ಜಿಲ್ಲೆ ರಾಮದುರ್ಗ ತಾಲ್ಲೂಕಿನ ಚಂದರಗಿಯಲ್ಲಿ ತತ್ವದಡಿ ಕ್ರೀಡಾ ಶಾಲೆಯನ್ನು ಪ್ರಾರಂಭಿಸಿದ್ದು, ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಶಾಲೆಯ ಅನೇಕ ವಿದ್ಯಾರ್ಥಿಗಳು ರಾಷ್ಟ್ರಮಟ್ಟದಲ್ಲಿ ಪ್ರತಿನಿಧಿಸಿ ನಮ್ಮ ರಾಜ್ಯಕ್ಕೆ ಗೌರವವನ್ನು ಕೊಟ್ಟಿದ್ದು ನಿಜವಲ್ಲವೆ ;

(ಇ) ಮೂಲಭೂತ ಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳಿಗೆ ತೊಂದರೆ ಯಾಗುತ್ತಿರುವುದನ್ನು ಗಮನಿಸಿ, ಸರ್ಕಾರಿ ವಸತಿ ಶಾಲೆಯಲ್ಲಿ ವಿದ್ಯಾರ್ಥಿಗಳಿಗೆ ನೀಡುವ ವಿದ್ಯಾರ್ಥಿ ವೇತನವನ್ನು ಈ ಶಾಲೆಯ ವಿದ್ಯಾರ್ಥಿಗಳಿಗೂ ಕೊಡಲು ಕ್ರಮ ಕೈಗೊಳ್ಳಲಾಗುವುದೇ ?

## ಇಂಗು ಕೆರೆ ನಿರ್ಮಾಣ

**ಶ್ರೀ ಮಹಾಂತೇಶ್ ಶಿವಾನಂದ ಕೌಜಲಗಿ (ಪದವೀಧರರ ಕ್ಷೇತ್ರ) :–**

೩೦೬ (೪೩೪) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸವದತ್ತಿ ತಾಲ್ಲೂಕಿನ ಹಲಕಿ ಸುಬ್ಬಾಪುರ ಗ್ರಾಮದ ಮಧ್ಯ ಇಂಗು ಕೆರೆ ನಿರ್ಮಾಣ ಮಾಡಲು ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ ;

(ಆ) ಸದರಿ ಇಂಗು ಕೆರೆ ನಿರ್ಮಾಣ ಮಾಡಲು ಬೇಕಾಗುವ ಹಣವೆಷ್ಟು ;

(ಇ) ಪ್ರಸ್ತುತ ಆಯವ್ಯಯದಲ್ಲಿ ಇಂಗು ಕೆರೆ ನಿರ್ಮಾಣ ಮಾಡಲು ಒದಗಿಸಲಾಗಿರುವ ಅನುದಾನ ಎಷ್ಟು ?

## ತಿಪ್ಪಗೊಂಡನಹಳ್ಳಿ ಹಾಗೂ ಮಂಚನಬೆಲೆ ಡ್ಯಾಂಗೆ ನೀರು ತರುವ ಯೋಜನೆ ಬಗ್ಗೆ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೭ (೪೩೭) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೇಕೆದಾಟು ಯೋಜನೆ ಯಾವ ಹಂತದಲ್ಲಿದೆ ;

(ಆ) ರಾಜ್ಯದಲ್ಲಿ ಕುಡಿಯುವ ನೀರಿನ ಅನುಕೂಲಕ್ಕಾಗಿ ಎಷ್ಟು ಟಿ.ಎಂ.ಸಿ. ನೀರನ್ನು ಸಂಗ್ರಹಿಸುವ ಗುರಿ ಇದೆ ; ಈ ಅಣೆಕಟ್ಟು ನಿರ್ಮಾಣಕ್ಕಾಗಿ ಇಲಾಖೆಯಲ್ಲಿ ಎಷ್ಟು ಹಣವನ್ನು ಮೀಸಲಿಡಲಾಗಿದೆ ; ಈಗಾಗಲೇ ಖರ್ಚಾಗಿರುವ ಹಣವೆಷ್ಟು; ಮುಂದಿನ ಯೋಜನೆಗಳೇನು ;



(ಇ) ಹೇಮಾವತಿಯಿಂದ ತಿಪ್ಪಗೊಂಡನಹಳ್ಳಿ ಹಾಗೂ ಮಂಚನಬೆಲೆ ಡ್ಯಾಂಗೆ ನೀರು ತರುವ ಯೋಜನೆ ಸರ್ಕಾರದ ಮುಂದಿದೆಯೇ ; ಇದಕ್ಕಾಗಿ ಯೋಜನೆ ರೂಪಿಸಲಾಗಿದೆಯೇ ; ಮತ್ತು ರೂಪಿಸಲಾಗಿದ್ದರೆ ಇದು ಯಾವ ಹಂತದಲ್ಲಿದೆ ; ಇದಕ್ಕಾಗಿ ಕಾಯ್ದಿರಿಸಿರುವ ಮುಂಗಡ ಹಣವೆಷ್ಟು ?

## ಆಸ್ತಿ ನೋಂದವಣೆಗಾಗಿ ಮುದ್ರಾಂಕ ಪತ್ರಗಳ ಅಭಾವ

**ಶ್ರೀ ಅಶ್ವತ್ ನಾರಾಯಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦೮ (೪೩೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಸ್ತಿ ನೋಂದಣಿಗಾಗಿ ತೆಗೆದುಕೊಳ್ಳುವ ಉದ್ದೇಶಕ್ಕೆ ಬಳಸುವ ಮುದ್ರಾಂಕ ಪತ್ರಗಳು (stamp paper) ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸ್ಟಾಂಪ್ ಪೇಪರ್ ಅಭಾವವಾಗಲು ಕಾರಣವೇನು ?

## ಅಟಲ್‌ಜೀ ಜನಸ್ನೇಹಿ ಕೇಂದ್ರಗಳು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೦೯ (೪೪೨) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ನೆಮ್ಮದಿ ಕೇಂದ್ರಗಳನ್ನು ಯಾವಾಗ ಯಾವ ಸಂಸ್ಥೆಯ ಸಹಯೋಗದಲ್ಲಿ ಸ್ಥಾಪಿಸಲಾಯಿತು ;

(ಆ) ಸದರಿ ಸಂಸ್ಥೆಯು ಒಪ್ಪಂದವನ್ನು ಯಾವಾಗ ರದ್ದು ಮಾಡಲಾಯಿತು ; ರದ್ದು ಮಾಡಲು ಕಾರಣಗಳೇನು ;

(ಇ) ಇವುಗಳನ್ನು ಅಟಲ್‌ಜೀ ಜನಸ್ನೇಹಿ ಕೇಂದ್ರಗಳನ್ನಾಗಿ ಯಾವ ದಿನಾಂಕದಿಂದ ಪರಿವರ್ತಿಸಲಾಯಿತು ; (ವಿವರವಾಗಿ ಆದೇಶದ ಪ್ರತಿಯೊಂದಿಗೆ ಮಾಹಿತಿ ನೀಡುವುದು)

(ಈ) ರಾಜ್ಯದಲ್ಲಿ ಎಷ್ಟು ಅಟಲ್‌ಜೀ ಜನಸ್ನೇಹಿ ಕೇಂದ್ರಗಳು ಇವೆ ? (ಜಿಲ್ಲಾವಾರು, ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು)

## ನೆಮ್ಮದಿ ಕೇಂದ್ರಗಳಿಗೆ ಸೋಲಾರ್ ವಿದ್ಯುತ್ ಒದಗಿಸುವ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೧೦ (೪೪೩) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೆಮ್ಮದಿ ಕೇಂದ್ರಗಳಿಗೆ ಸೋಲಾರ್ ವ್ಯವಸ್ಥೆಯಿಂದ ವಿದ್ಯುತ್ ನೀಡುವ ಯೋಜನೆಯನ್ನು ಯಾವ ಇಂಧನ ನಿಗಮದ ಸಹಯೋಗದೊಂದಿಗೆ ಯಾವ ದಿನಾಂಕದಿಂದ ಪ್ರಾರಂಭಿಸಲಾಯಿತು ;

(ಆ) ಸದರಿ ಯೋಜನೆಯಡಿ ವಿದ್ಯುತ್ ಸಂಪರ್ಕ ಪಡೆದ ನೆಮ್ಮದಿ ಕೇಂದ್ರಗಳು ಯಾವುವು ; ಪಡೆಯದೇ ಇದ್ದ ಕೇಂದ್ರಗಳು ಯಾವುವು ;

(ಇ) ಇದರಡಿಯಲ್ಲಿ ಯೋಜನೆಗೆ ಖರ್ಚಾದ ಹಣ ಎಷ್ಟು ; ಯೋಜನೆ ಕಾರ್ಯಗತ ಗೊಳಿಸಿದ ಗುತ್ತಿಗೆದಾರ ಸಂಸ್ಥೆ ಯಾವುದು ;



(ಈ) ಸದರಿ ಯೋಜನೆಯಡಿ ಪ್ರತಿಯೊಂದು ಕೇಂದ್ರಕ್ಕೆ ಯಾವ ಯಾವ ಉಪಕರಣ ಸಾಮಗ್ರಿ ಒದಗಿಸಲಾಗಿದೆ ; ಅವುಗಳ ಮೌಲ್ಯ ಎಷ್ಟು ;

(ಉ) ಸದರಿ ಸಾಮಗ್ರಿಗಳು ಈಗ ಯಾರ ಅಧೀನದಲ್ಲಿ ಇವೆ ?

## ಕಾರ್ಮಿಕರ ಕಲ್ಯಾಣದ ಬಗ್ಗೆ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೧೧ (೪೪೧) ಮಾನ್ಯ ಕಾರ್ಮಿಕ ರಾಜ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಾರ್ಮಿಕರ ಕಲ್ಯಾಣಕ್ಕಾಗಿ ಹಾಲಿ ಜಾರಿಯಲ್ಲಿರುವ ಯೋಜನೆಗಳಾವುವು ; (ಯೋಜನಾವಾರು ಮಾಹಿತಿ ನೀಡುವುದು)

(ಆ) ಸದರಿ ಯೋಜನೆಗಳಿಗೆ ೨೦೧೪–೧೫ನೇ ಸಾಲಿನಲ್ಲಿ ಕೇಂದ್ರ ಸರ್ಕಾರದಿಂದ ಯಾವ ಯಾವ ಲೆಕ್ಕ ಶೀರ್ಷಿಕೆಯಡಿ ಎಷ್ಟು ಹಣ ಒದಗಿಸಲಾಗಿದೆ ;

(ಇ) ಆ ಪೈಕಿ ಖರ್ಚಾದ ಹಣ ಎಷ್ಟು; ಉಳಿದ ಹಣ ಎಷ್ಟು;

(ಈ) ಇಲಾಖೆಯ ಸಿ & ಆರ್ ಪ್ರಕಾರ ಮಂಜೂರಾದ ಹುದ್ದೆಗಳು ಎಷ್ಟು; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ? (ಹುದ್ದೆಯವಾರು ವೇತನ ಶ್ರೇಣಿ, ವಿದ್ಯಾರ್ಹತೆ, ವಿವರವಾದ ಮಾಹಿತಿ ಕೊಡುವುದು)

## ಕೃಷಿ ಅರಣ್ಯೀಕರಣ

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೧೨ (೪೪೪) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರೈತರ ಅಭಿವೃದ್ಧಿಗೆ ಇಲಾಖೆಯಲ್ಲಿ ಜಾರಿಯಲ್ಲಿರುವ ಯೋಜನೆಗಳಾವುವು ; (ಯೋಜನಾವಾರು ವಿವರ ಒದಗಿಸುವುದು)

(ಆ) ಕೃಷಿ ಅರಣ್ಯೀಕರಣ ಎಂದರೇನು ;

(ಇ) ಎನ್.ಆರ್.ಇ.ಜಿ.ಎ ಯೋಜನೆಯಡಿ ರೈತರು ಒಂದು ಸಸಿ ನೆಡಲು ೨೦೧೦–೧೧ ನೇ ಸಾಲಿನಲ್ಲಿ ರೂ ೧೦೦ ನ್ನು ನಿಗಧಿಪಡಿಸಿದ್ದು, ಸದರಿ ವರ್ಷದಲ್ಲಿ ಅದೇ ಸಸಿ ನೆಡುವುದಕ್ಕೆ ರೂ.೬೬ ನ್ನು ನಿಗಧಿಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ರೈತರಿಗೆ ಹಿಂದೆ ಇದ್ದಂತೆ ಒಂದು ಸಸಿ ನೆಡಲು ೧೦೦ ರೂ ಅಥವಾ ಅದಕ್ಕಿಂತ ಹೆಚ್ಚು ಮಾಡಿದರೆ ರೈತರಿಗೆ ಅನುಕೂಲವಾಗುವುದಿಲ್ಲವೇ ?

## ಎತ್ತಿನ ಹೊಳೆ ಯೋಜನೆ ಜಾರಿಗೊಳಿಸುವ ಕುರಿತು

**ಶ್ರೀ ಆರ್. ಚೌಡರೆಡ್ಡಿ ತೂಪಲ್ಲಿ (ಪದವೀಧರರ ಕ್ಷೇತ್ರ) :–**

೩೧೩ (೪೪೦) ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬರಪೀಡಿತ ಪ್ರದೇಶಗಳ ಜನರ ಕುಡಿಯುವ ನೀರಿನ ಸಮಸ್ಯೆ ಬಗೆಹರಿಸಲು ಎತ್ತಿನ ಹೊಳೆ ಯೋಜನೆಯನ್ನು ಯಾವಾಗಿನಿಂದ ಜಾರಿಗೊಳಿಸಲಾಗಿದೆ ;

(ಆ) ಯೋಜನೆಯ ಅಂದಾಜು ಮೊತ್ತವೆಷ್ಟು ;



(ಇ) ಸದರಿ ಯೋಜನೆಯಿಂದ ಅನುಕೂಲ ಪಡೆಯುವ ಜಿಲ್ಲೆಗಳು ಹಾಗೂ ತಾಲ್ಲೂಕುಗಳು ಮತ್ತು ಗ್ರಾಮಗಳು ಎಷ್ಟು ;

(ಈ) ಪ್ರಸ್ತುತ ಯೋಜನೆಯು ಯಾವ ಹಂತದಲ್ಲಿದೆ ; ಖರ್ಚಾದ ಅನುದಾನ ಎಷ್ಟು ;

(ಉ) ಯಾವ ಕಾಲಮಿತಿಯೊಳಗೆ ಈ ಯೋಜನೆಯನ್ನು ಪೂರ್ಣಗೊಳಿಸಲು ಉದ್ದೇಶಿಸಲಾಗಿದೆ ?

## ಪೋಡಿ ಮುಕ್ತ ಗ್ರಾಮಗಳನ್ನಾಗಿಸುವ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) :–**

೩೧೪ (೪೪೮) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಪೋಡಿ ಮುಕ್ತ ಗ್ರಾಮಗಳನ್ನಾಗಿ ಮಾಡಲು ಎಷ್ಟು ಗ್ರಾಮಗಳನ್ನು ಆಯ್ಕೆ ಮಾಡಿಕೊಳ್ಳಲಾಗಿದೆ ; ಅವುಗಳು ಯಾವುವು ;

(ಆ) ಎಷ್ಟು ಕಾಲಮಿತಿಯಲ್ಲಿ ಗ್ರಾಮಗಳನ್ನು ಪೋಡಿ ಮುಕ್ತಗೊಳಿಸಲಾಗುವುದು ;

(ಇ) ಪೋಡಿ ಮುಕ್ತ ಗ್ರಾಮಗಳನ್ನು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಯಾವ ಹಂತದಲ್ಲಿದೆ ?

## ಸಣ್ಣ ನೀರಾವರಿ ಇಲಾಖೆಯ ಕಾಮಗಾರಿಗಳ ಕುರಿತು

**ಶ್ರೀ ಇಕ್ಬಾಲ್ ಅಹ್ಮದ್ ಸರಡಗಿ (ನಾಮನಿರ್ದೇಶನ) :–**

೩೧೫ (೪೪೭) ಮಾನ್ಯ ಸಣ್ಣ ನೀರಾವರಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೩–೧೪ ಹಾಗೂ ೨೦೧೪–೧೫ ನೇ ಸಾಲಿನಲ್ಲಿ ಕಲಬುರಗಿ ಜಿಲ್ಲೆಗೆ ಸಣ್ಣ ನೀರಾವರಿ ಯೋಜನೆಯಡಿ ಯಾವ ಯಾವ

ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; (ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಪ್ರತಿ ಕಾಮಗಾರಿಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ;

(ಇ) ಇದರಲ್ಲಿ ಮುಕ್ತಾಯಗೊಂಡ ಕಾಮಗಾರಿಗಳೆಷ್ಟು ; ಪ್ರಗತಿಯಲ್ಲಿರುವ ಕಾಮಗಾರಿಗಳೆಷ್ಟು ? (ವಿವರ ಒದಗಿಸುವುದು)

## ಬಿಳಿಗಿರಿ ರಂಗನ ಬೆಟ್ಟ ಅರಣ್ಯದ ಪೋಡುಗಳಲ್ಲಿರುವ ಗಿರಿಜನರ ಸಮಸ್ಯೆಗಳ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೬ (೧೮೭) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಳಿಗಿರಿ ರಂಗನ ಬೆಟ್ಟ ಅರಣ್ಯದಲ್ಲಿರುವ ಹಾಡಿಗಳಲ್ಲಿ ವಾಸವಾಗಿರುವ ಗಿರಿಜನರು ತಮ್ಮ ಸಾಕು ಪ್ರಾಣಿಗಳನ್ನು (ಹಸು, ಎಮ್ಮೆ, ಕುರಿ, ಮೇಕೆ ಇತ್ಯಾದಿ) ೧೫ ದಿನಗಳ ಒಳಗಾಗಿ ಮಾರುವಂತೆ ಅರಣ್ಯ ಅಧಿಕಾರಿಗಳು ನೋಟೀಸ್ ನೀಡಿದ್ದಾರೆಯೇ ; (ವಿವರ ಒದಗಿಸುವುದು)

(ಆ) ಇದು ಅನುಸೂಚಿತ ಬುಡಕಟ್ಟುಗಳು ಮತ್ತು ಇತರ ಪಾರಂಪರಿಕ ಅರಣ್ಯ ವಾಸಿಗಳ ಅರಣ್ಯ ಹಕ್ಕು ಮಾನ್ಯತೆ ನಿಯಮ ೨೦೦೮ಕ್ಕೆ ವಿರುದ್ಧವಾಗಿಲ್ಲವೇ ;



(ಇ) ಗಿರಿಜನರು ತಮ್ಮ ಜೀವನೋಪಾಯಕ್ಕೆ ಸಾಕಿಕೊಂಡಿರುವ ಪ್ರಾಣಿಗಳನ್ನು ಮಾರುವಂತೆ ಹೇಳುವುದು ಸೂಕ್ತವೇ; ಈ ಬಗ್ಗೆ ರಾಜ್ಯ ಸರ್ಕಾರದ ನಿಲುವೇನು ? (ವಿವರ ಒದಗಿಸುವುದು)

## ಚಾಮರಾಜನಗರದಲ್ಲಿ ಜವಳಿ ಪಾರ್ಕ್ ಸ್ಥಾಪನೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೭ (೧೮೮) ಮಾನ್ಯ ಜವಳಿ ಹಾಗೂ ಬಂದರು ಮತ್ತು ಒಳನಾಡು ಜಲ ಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರದಲ್ಲಿ ಜವಳಿ ಪಾರ್ಕ್ ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿವರ ಒದಗಿಸುವುದು)

(ಆ) ರೇಷ್ಮೆ ನೂಲಿಗೆ ಪ್ರಸಿದ್ಧವಾದ, ರೇಷ್ಮೆ ಪಾರಂಪರಿಕ ಬಟ್ಟೆಗಳ ತಯಾರಿಕೆಗೆ ಹೆಸರಾದ ಚಾಮರಾಜನಗರ ಜಿಲ್ಲೆಯಲ್ಲಿ ಜವಳಿ ಪಾರ್ಕ್ ಸ್ಥಾಪಿಸಲು ಸರ್ಕಾರಕ್ಕಿರುವ ತೊಂದರೆಗಳೇನು ?

## ಅರಣ್ಯ ಇಲಾಖೆಯ ನೌಕರರಿಗೆ ಮುಂಬಡ್ತಿ ಮತ್ತು ಅವ್ಯವಹಾರದ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೧೮ (೩೯೦) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಲಯ ಅರಣ್ಯಾಧಿಕಾರಿ, ಪ್ರಥಮ ದರ್ಜೆ ಸಹಾಯಕರು, ದ್ವಿತೀಯ ದರ್ಜೆ ಸಹಾಯಕರು, ಇವರುಗಳಿಗೆ ಮುಂಬಡ್ತಿ ನೀಡಿದ್ದು, ಈ ಮುಂಬಡ್ತಿಯಲ್ಲಿ ಅವ್ಯವಹಾರ ನಡೆಸಿ ಆಡಳಿತ ವಿಭಾಗ "ವ್ಯವಸ್ಥಾಪಕರನ್ನು" ಅಮಾನತುಗೊಳಿಸಲಾಗಿರುತ್ತದೆ. ತದನಂತರ

ಇಲಾಖೆ ಇತರೆ ಅಧಿಕಾರಿಗಳ ಮತ್ತು "ಮುಖ್ಯಸ್ಥರ" ಮೇಲೆ ಕ್ರಮ ಕೈಗೊಳ್ಳದೇ ನಿರ್ಲಕ್ಷ್ಯ ತಾಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಆ) ವಲಯ ಅರಣ್ಯಾಧಿಕಾರಿಗಳು, ಅರಣ್ಯಾಧಿಕಾರಿ, ಇತರೆ ನೌಕರರಿಗೆ ಮುಂಬಡ್ತಿ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು ಹಾಗೂ ತೆಗೆದುಕೊಂಡಿರುವ ಕ್ರಮಗಳೇನು ?

## "ಯೋಜನಾ ನಿರಾಶ್ರಿತರಿಗೆ ಕಾಯ್ದಿರಿಸಿದ ಭೂಮಿಯನ್ನು" ಡೀಮ್ಡ್ ಫಾರೆಸ್ಟ್‌ಗೆ ಸೇರಿಸಿರುವ ಬಗ್ಗೆ

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೯೯ (೩೯೧) ಮಾನ್ಯ ಅರಣ್ಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕೃಷಿ ಭೂಮಿಯನ್ನು ಅರಣ್ಯ ಇಲಾಖೆಯು "ಡೀಮ್ಡ್ ಫಾರೆಸ್ಟ್"ಗೆ ಸೇರ್ಪಡೆಗೊಳಿಸಿರುವುದರಿಂದ ರೈತರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರದಿಂದ ಕೈಗೊಂಡ ಕ್ರಮಗಳೇನು; (ವಿವರ ನೀಡುವುದು)

(ಆ) "ಯೋಜನಾ ನಿರಾಶ್ರಿತರಿಗೆ" ಹಂಚಲು ಕಾಯ್ದಿರಿಸಿದ ಜಮೀನನ್ನು "ಡೀಮ್ಡ್ ಫಾರೆಸ್ಟ್" ಪಟ್ಟಿಗೆ ಸೇರಿಸಿದ್ದು ಸಂತ್ರಸ್ಥರಿಗೆ ಅರಣ್ಯ ಇಲಾಖೆಯಿಂದ ನಿರಾಪೇಕ್ಷಣಾ ಪತ್ರ ನೀಡದೇ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)



(ಇ) ಯೋಜನಾ ನಿರಾಶ್ರಿತರಿಗೆ ಕಾಯ್ದಿರಿಸಿದ ಜಮೀನಿನ ಬಗ್ಗೆ ಅರಣ್ಯ ಇಲಾಖೆಯು ವಿನಾಕಾರಣ ಹಸ್ತಕ್ಷೇಪ ಮಾಡಲು ಕಾರಣಗಳೇನು ; ಸರ್ಕಾರದಿಂದ ಈ ವಿಷಯದ ಬಗ್ಗೆ ನಿರ್ದೇಶನ ನೀಡಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಈ) ಯೋಜನಾ ನಿರಾಶ್ರಿತರಿಗೆ ಕಾಯ್ದಿರಿಸಿದ ಜಮೀನಿನ ವಿವರಗಳು ಅರಣ್ಯ ಇಲಾಖೆಯ ಗಮನಕ್ಕೆ ಬಂದಿದೆಯೇ ; ಬಂದಿದ್ದರೆ ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು ?

## "ಕಂದಾಯ ಇಲಾಖೆ ನೌಕರರ ಜ್ಯೇಷ್ಠತಾ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಕುರಿತು"

**ಶ್ರೀ ಜಿ.ಎಸ್. ನ್ಯಾಮಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩೨೦ (೩೯೯) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನೋಂದಣಿ ಮತ್ತು ಮುದ್ರಾಂಕ ಇಲಾಖೆ ಮತ್ತು ಭೂ ಮಾಪನ ಇಲಾಖೆಯ "ಗ್ರೂಫ್ ಎ.ಬಿ.ಸಿ" ಅಧಿಕಾರಿಗಳ ಜ್ಯೇಷ್ಠತಾ ಪಟ್ಟಿಯನ್ನು ಇಲಾಖೆ ವೆಬ್‌ಸೈಟ್‌ನಲ್ಲಿ ಪ್ರಕಟಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಆ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ " ಗ್ರೂಫ್ ಬಿ.ಸಿ" (ಹುದ್ದೆಗಳ) ನೌಕರರ ಜ್ಯೇಷ್ಠತಾ ಪಟ್ಟಿಯಲ್ಲಿ ಅಕ್ರಮವಾಗಿ ಜ್ಯೇಷ್ಠತೆಯನ್ನು ನಿಗದಿಪಡಿಸಿ ಮುಂಬಡ್ತಿ ನೀಡುತ್ತಿದ್ದು, ಇಲಾಖೆಯ ಮುಖ್ಯಸ್ಥರುಗಳು ಜ್ಯೇಷ್ಠತಾ ನಿಗದಿ ಪಡಿಸುವ ಬಗ್ಗೆ ನೌಕರರಿಗೆ ತೊಂದರೆ ನೀಡುತ್ತಿದ್ದು ಸರ್ಕಾರದ ಗಮನಕ್ಕೆ ಬಂದಿದೆಯೇ ;

"ವೆಬ್‌ಸೈಟ್" ಹುದ್ದೆವಾರು ಜ್ಯೇಷ್ಠತಾ ಪಟ್ಟಿ ಪ್ರಕಟಿಸಲು ಸರ್ಕಾರಕ್ಕೆ ಇರುವ ತೊಂದರೆಗಳೇನು ; (ವಿವರ ನೀಡುವುದು)

(ಇ) ನೋಂದಣಿ ಮತ್ತು ಮುದ್ರಾಂಕ ಇಲಾಖೆಯಲ್ಲಿ ಅನ್ಯ ಇಲಾಖೆಯಿಂದ ನಿಯೋಜನೆ ಮೇಲೆ ಬಂದಿದ್ದು, ಇವರುಗಳನ್ನು ಪುನ: ಮಾತೃ ಇಲಾಖೆಗೆ ಕಳುಹಿಸಲು ಇರುವ ತೊಂದರೆಗಳೇನು ಹಾಗೂ ಖಾಲಿ ಇರುವ ಪ್ರಥಮ ದರ್ಜೆ ಸಹಾಯಕರು ಮತ್ತು ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳಿಗೆ ಮುಂಬಡ್ತಿ ನೀಡಲು ಸರ್ಕಾರಕ್ಕೆ ಇರುವ ತೊಂದರೆಗಳೇನು; ಪ್ರಸ್ತುತ ಯಾವ ಕ್ರಮ ಕೈಗೊಳ್ಳುತ್ತದೆ ? (ವಿವರ ನೀಡುವುದು)

**ವಿ. ಶ್ರೀಶ್**

ಕಾರ್ಯದರ್ಶಿ

ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಘಟಕ–2, ಬೆಂ–59/ಕಾ.ಸೂ. 3367/700 ಪ್ರತಿಗಳು/28–06–2014